ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 128 Tuesday **03-11-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 128 ಮಂಗಳವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಸಿರಿಧಾನ್ಯದ ಕೃಷಿಗೆ ಹಿನ್ನಡೆ: ನವಣೆ ಬೆಳೆಯಿಂದ ವಿಮುಖರಾಗುತ್ತಿರುವ ರೈತರು

“ಮುಂಜಾನೆಯ ಮೆರಗು”

ಜಗಳೂರು ನ, 02– ಆರೋಗ್ಯದ ದೃಷ್ಟಿಯಿಂದ ಅತ್ಯಂತ ಪೌಷ್ಟಿಕ ಆಹಾರವೆಂದು ಗುರುತಿಸಿಕೊಂಡಿರುವ ಸಿರಿಧಾನ್ಯಗಳ ಪೈಕಿ ನವಣೆ ಪ್ರಮುಖವಾದ ಬೆಳೆ. ಕಡಿಮೆ ಮಳೆ, ಕಡಿಮೆ ನೀರು ಹಾಗೂ ಅಲ್ಪಾವಧಿಯಲ್ಲಿ ಬೆಳೆಯುವ ಸಾಮರ್ಥ್ಯ ಹೊಂದಿರುವ ನವಣೆ ಬೆಳೆ ಹಿಂದೆ ಜಗಳೂರು ತಾಲ್ಲೂಕಿನ ರೈತರ ಕೃಷಿ ಪದ್ಧತಿಯ ಅವಿಭಾಜ್ಯ ಭಾಗವಾಗಿತ್ತು. ಆದರೆ ಇತ್ತೀಚಿನ ವರ್ಷಗಳಲ್ಲಿ ನವಣೆ ಬೆಳೆಯುವ ರೈತರ ಸಂಖ್ಯೆ ಹಾಗೂ ಕೃಷಿ ವಿಸ್ತೀರ್ಣ ಕ್ರಮೇಣ ಕಡಿಮೆಯಾಗುತ್ತಿರುವುದು ಕೃಷಿ ವಲಯದಲ್ಲಿ ಆತಂಕ ಮೂಡಿಸಿದೆ.



ಒಂದು ಕಾಲದಲ್ಲಿ ಮಳೆ ಆಧಾರಿತ ಕೃಷಿಯನ್ನೇ ನಂಬಿಕೊಂಡಿದ್ದ ರೈತರು ಜೋಳ, ರಾಗಿ, ನವಣೆ, ಸಜ್ಜೆ ಸೇರಿದಂತೆ ವಿವಿಧ ಸಿರಿಧಾನ್ಯಗಳನ್ನು ಬೆಳೆಯುತ್ತಿದ್ದರು. ಆದರೆ ಆಧುನಿಕ ಕೃಷಿ ಪದ್ಧತಿ, ವಾಣಿಜ್ಯ ಬೆಳೆಗಳತ್ತ ಹೆಚ್ಚುತ್ತಿರುವ ಒಲವು, ಕೃಷಿ ವೆಚ್ಚದ ಏರಿಕೆ ಹಾಗೂ ಬೆಳೆದ ಬೆಳೆಗೆ ಸೂಕ್ತ ಮಾರುಕಟ್ಟೆ ದೊರೆಯದಿರುವುದು ನವಣೆ ಕೃಷಿಯ ವಿಸ್ತೀರ್ಣ ಕುಸಿತಕ್ಕೆ ಪ್ರಮುಖ ಕಾರಣಗಳಾಗಿವೆ.

ಪೌಷ್ಟಿಕಾಂಶಗಳ ಆಗರ ನವಣೆ

ನವಣೆ ಅತ್ಯಂತ ಪೌಷ್ಟಿಕಾಂಶಗಳನ್ನು ಹೊಂದಿರುವ ಸಿರಿಧಾನ್ಯವಾಗಿದೆ. ಇದರಲ್ಲಿ ನಾರಿನಾಂಶ, ಪ್ರೋಟೀನ್, ಕಬ್ಬಿಣ, ಖನಿಜಾಂಶಗಳು ಹಾಗೂ ದೇಹಕ್ಕೆ ಅಗತ್ಯವಾದ ಹಲವು ಪೋಷಕಾಂಶಗಳಿವೆ. ಅಕ್ಕಿ ಮತ್ತು ಗೋಧಿಗೆ ಪರ್ಯಾಯವಾಗಿ ಬಳಸಬಹುದಾದ ಈ ಧಾನ್ಯವನ್ನು ಅನ್ನ, ಉಪ್ಪಿಟ್ಟು, ದೋಸೆ, ಇಡ್ಲಿ, ಪಾಯಸ ಸೇರಿದಂತೆ ವಿವಿಧ ಆಹಾರ ಪದಾರ್ಥಗಳ ತಯಾರಿಕೆಗೆ ಬಳಸಬಹುದು.

ಕಡಿಮೆ ಮಳೆಯಲ್ಲೂ ಬೆಳೆಯುವ ಸಾಮರ್ಥ್ಯ

ಜಗಳೂರು ತಾಲ್ಲೂಕು ಅರೆಮಲೆನಾಡು ಹಾಗೂ ಬಯಲುಸೀಮೆಯ ಕೃಷಿ ಲಕ್ಷಣಗಳನ್ನು ಹೊಂದಿದ್ದು, ಮಳೆಯ ಪ್ರಮಾಣ ಕಡಿಮೆ ಇರುವ ಪ್ರದೇಶವಾಗಿದೆ. ವಾರ್ಷಿಕ ಸರಾಸರಿ ಮಳೆಯೂ ಸೀಮಿತವಾಗಿರುವುದರಿಂದ ರೈತರು ಮಳೆ ಆಧಾರಿತ ಕೃಷಿಯನ್ನೇ ಹೆಚ್ಚಾಗಿ ಅವಲಂಬಿಸಿದ್ದಾರೆ.

ಕಡಿಮೆ ಅವಧಿಯಲ್ಲಿ ಕಟಾವಿಗೆ ಬರುವುದರಿಂದ ರೈತರಿಗೆ ಮತ್ತೊಂದು ಬೆಳೆಯನ್ನು ಬೆಳೆಯಲು ಅವಕಾಶ ಕಲ್ಪಿಸುತ್ತದೆ. ಮಣ್ಣಿನ ತೇವಾಂಶವನ್ನು ಸಮರ್ಪಕವಾಗಿ ಬಳಸಿಕೊಂಡು ಕೃಷಿ ಮಾಡುವ ರೈತರಿಗೆ ನವಣೆ ಉತ್ತಮ ಪರ್ಯಾಯ ಬೆಳೆಯಾಗಬಲ್ಲದು.

ವಿಸ್ತೀರ್ಣ ಕಡಿಮೆಯಾಗಲು ಕಾರಣವೇನು?

ಜಗಳೂರು ತಾಲ್ಲೂಕಿನಲ್ಲಿ ಇತ್ತೀಚಿನ ದಿನಗಳಲ್ಲಿ ನವಣೆ ಬೆಳೆಯ ವಿಸ್ತೀರ್ಣ ಕಡಿಮೆಯಾಗುತ್ತಿರುವುದಕ್ಕೆ ಹಲವು ಕಾರಣಗಳಿವೆ.

ಮುಖ್ಯವಾಗಿ ರೈತರು ಬೆಳೆದ ಬೆಳೆಗೆ ಸೂಕ್ತ ಬೆಲೆ ದೊರೆಯದಿರುವುದು ಪ್ರಮುಖ ಸಮಸ್ಯೆಯಾಗಿದೆ. ಕಷ್ಟಪಟ್ಟು ಬೆಳೆದ ನವಣೆಯನ್ನು ಮಾರಾಟ ಮಾಡಲು ಸ್ಥಳೀಯವಾಗಿ ವ್ಯವಸ್ಥಿತ ಮಾರುಕಟ್ಟೆ ಇಲ್ಲದಿರುವುದರಿಂದ ರೈತರು ಮಧ್ಯವರ್ತಿಗಳನ್ನು ಅವಲಂಬಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಇನ್ನು ಕೆಲವು ರೈತರು ನವಣೆ ಬೆಳೆಯುವುದಕ್ಕಿಂತ ಮೆಕ್ಕೆಜೋಳ, ಶೇಂಗಾ, ಹತ್ತಿ, ತೊಗರಿ ಸೇರಿದಂತೆ ಇತರ ಬೆಳೆಗಳಿಂದ ಹೆಚ್ಚಿನ ಆದಾಯ ಪಡೆಯಬಹುದು ಎಂಬ ನಿರೀಕ್ಷೆಯಲ್ಲಿದ್ದಾರೆ. ಕೃಷಿ ವೆಚ್ಚ ಹೆಚ್ಚುತ್ತಿರುವ ಸಂದರ್ಭದಲ್ಲಿ ಲಾಭದ ಖಚಿತತೆ ಇಲ್ಲದ ಬೆಳೆ ಬೆಳೆಯಲು ರೈತರು ಹಿಂದೇಟು ಹಾಕುತ್ತಿದ್ದಾರೆ.

ಜಗಳೂರು ತಾಲ್ಲೂಕಿನಲ್ಲಿ ನವಣೆ ಬೆಳೆಗಾರರ ಅನುಕೂಲಕ್ಕಾಗಿ ಸ್ಥಳೀಯ ಖರೀದಿ ಕೇಂದ್ರ ಸ್ಥಾಪಿಸಬೇಕು. ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಅರ್ಹ ರೈತರಿಂದ ಖರೀದಿಸುವ ವ್ಯವಸ್ಥೆ ಕಲ್ಪಿಸಬೇಕು. ರೈತ ಉತ್ಪಾದಕ ಕಂಪನಿಗಳು ಹಾಗೂ ಸಹಕಾರ ಸಂಘಗಳ ಮೂಲಕ ನವಣೆ ಸಂಗ್ರಹಣೆ ಮತ್ತು ಮಾರಾಟಕ್ಕೆ ಪ್ರೋತ್ಸಾಹ ನೀಡಬೇಕು.

ಇದಲ್ಲದೆ ನವಣೆಯನ್ನು ಸಂಸ್ಕರಿಸಿ ವಿವಿಧ ಆಹಾರ ಉತ್ಪನ್ನಗಳನ್ನಾಗಿ ತಯಾರಿಸುವ ಘಟಕಗಳನ್ನು ಸ್ಥಾಪಿಸಿದರೆ ಸ್ಥಳೀಯವಾಗಿ ಉದ್ಯೋಗಾವಕಾಶಗಳೂ ಸೃಷ್ಟಿಯಾಗಲಿವೆ.

ಯುವ ರೈತರಿಗೆ ಹೊಸ ಅವಕಾಶ

ನ್ ವ್ ಣ್ ಂ ಯ್ ನ್ ್ನ ಕೇವಲ ಕಚ್ಚಾ ಧಾನ್ಯವಾಗಿ ಮಾರಾಟ ವ್ ಾ ಡ್ ು ವ್ ದ್ ಕ್ಕಿ ಂ ತ್ ಸ್ ್ವ ಚ್ ್ಛ ಗ್ ೊ ಳಿ ಸಿ , ಸಂಸ್ಕರಿಸಿ, ಪ್ಯಾಕಿಂಗ್ ಮಾಡಿ ಮಾರುಕಟ್ಟೆಗೆ ಪರಿಚಯಿಸುವುದರಿಂದ ಹೆಚ್ಚಿನ ಮೌಲ್ಯ ಪಡೆಯಲು ಅವಕಾಶವಿದೆ.



ನವಣೆ ಹಿಟ್ಟು, ನವಣೆ ರವೆ, ನವಣೆ ಬಿಸ್ಕತ್ತು, ನವಣೆ ದೋಸೆ ಹಿಟ್ಟು ಸೇರಿದಂತೆ ವಿವಿಧ ಉತ್ಪನ್ನಗಳನ್ನು ತಯಾರಿಸಿ ಮಾರಾಟ ಮಾಡುವ ಸಣ್ಣ ಉದ್ಯಮಗಳನ್ನು ಗ್ರಾಮೀಣ ಪ್ರದೇಶಗಳಲ್ಲಿ ಆರಂಭಿಸಬಹುದು. ಇದರಿಂದ ರೈತರಿಗೆ ಹೆಚ್ಚುವರಿ ಆದಾಯ ದೊರೆಯುವುದರ ಜೊತೆಗೆ ಮಹಿಳೆಯರು ಮತ್ತು ಯುವಕರಿಗೆ ಉದ್ಯೋಗಾವಕಾಶಗಳು ಸಿಗಲಿವೆ.

ಕೃಷಿ ಇಲಾಖೆ ಮುಂದಾಗಲಿ

ನವಣೆ ಸೇರಿದಂತೆ ಸಿರಿಧಾನ್ಯಗಳ ಕೃಷಿ ವಿಸ್ತೀರ್ಣ ಹೆಚ್ಚಿಸುವ ನಿಟ್ಟಿನಲ್ಲಿ ಕೃಷಿ ಇಲಾಖೆ ವಿಶೇಷ ಗಮನಹರಿಸಬೇಕಿದೆ. ತಾಲ್ಲೂಕಿನ ಯಾವ ಗ್ರಾಮಗಳಲ್ಲಿ ಹಿಂದೆ ಹೆಚ್ಚು ನವಣೆ ಬೆಳೆಯಲಾಗುತ್ತಿತ್ತು, ಪ್ರಸ್ತುತ ಎಷ್ಟು ಪ್ರದೇಶದಲ್ಲಿ ಬೆಳೆಯಲಾಗುತ್ತಿದೆ ಹಾಗೂ ವಿಸ್ತೀರ್ಣ ಕಡಿಮೆಯಾಗಲು ನಿಖರ ಕಾರಣಗಳೇನು ಎಂಬುದರ ಕುರಿತು ಸಮೀಕ್ಷೆ ನಡೆಸಬೇಕು.

ಒಟ್ಟಾರೆಯಾಗಿ, ಕಡಿಮೆ ಮಳೆಯ ಪ್ರದೇಶವಾದ ಜಗಳೂರು ತಾಲ್ಲೂಕಿನಲ್ಲಿ ನವಣೆ ಕೃಷಿ ರೈತರಿಗೆ ಉತ್ತಮ ಪರ್ಯಾಯವಾಗುವ ಸಾಮರ್ಥ್ಯ ಹೊಂದಿದೆ. ಆದರೆ ಕೇವಲ ಸಿರಿಧಾನ್ಯಗಳ ಮಹತ್ವದ ಬಗ್ಗೆ ಜಾಗೃತಿ ಮೂಡಿಸಿದರೆ ಸಾಲದು. ರೈತರು ಬೆಳೆದ ಬೆಳೆಗೆ ನ್ಯಾಯಯುತ ಬೆಲೆ, ಖರೀದಿ ಭರವಸೆ, ಸಂಸ್ಕರಣಾ ಘಟಕ ಹಾಗೂ ಸುಲಭ ಮಾರುಕಟ್ಟೆ ಸಂಪರ್ಕ ದೊರೆಯಬೇಕು.

ಸಕಾಲಕ್ಕೆ ನೀರಿನ ಕಂದಾಯ ಪಾವತಿಸಿ ಪಟ್ಟಣದ ಅಭಿವೃದ್ಧಿಗೆ ಸಹಕರಿಸಿ: ಸಿ. ಲೋಕ್ಯಾನಾಯ್ಕ

“ಮುಂಜಾನೆಯ ಮೆರಗು”

ಜಗಳೂರು ನ, 02– ಪಟ್ಟಣದ ಸಾರ್ವಜನಿಕರು ಸಕಾಲಕ್ಕೆ ನೀರಿನ ಕಂದಾಯವನ್ನು ಪಾವತಿಸುವ ಮೂಲಕ ಪಟ್ಟಣದ ಅಭಿವೃದ್ಧಿ ಕಾರ್ಯಗಳಿಗೆ ಸಹಕರಿಸಬೇಕು ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿ. ಲೋಕ್ಯಾನಾಯ್ಕ ಮನವಿ ಮಾಡಿದರು.



ಪಟ್ಟಣ ಪಂಚಾಯಿತಿ ಕಚೇರಿಯಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಪಟ್ಟಣದ ಸಮಗ್ರ ಅಭಿವೃದ್ಧಿ ಹಾಗೂ ಮೂಲಸೌಕರ್ಯಗಳ ನಿರ್ವಹಣೆಗೆ ಸಾರ್ವಜನಿಕರ ಸಹಕಾರ ಅತ್ಯಗತ್ಯವಾಗಿದೆ. ಸಾರ್ವಜನಿಕರು ನಿಯಮಿತವಾಗಿ ನೀರಿನ ಕಂದಾಯ ಪಾವತಿಸುವುದರಿಂದ ಪಟ್ಟಣ ಪಂಚಾಯಿತಿಗೆ ಆದಾಯ ಹೆಚ್ಚಲಿದ್ದು, ಆ ಹಣವನ್ನು ಪಟ್ಟಣದ ಅಭಿವೃದ್ಧಿ ಕಾರ್ಯಗಳು ಹಾಗೂ ಸಾರ್ವಜನಿಕ ಸೌಲಭ್ಯಗಳ ಸುಧಾರಣೆಗೆ ಬಳಸಲು ಅನುಕೂಲವಾಗಲಿದೆ ಎಂದು ತಿಳಿಸಿದರು.

ಅದೇ ರೀತಿ, ಪಟ್ಟಣವನ್ನು ಸ್ವಚ್ಛ ಹಾಗೂ ಸುಂದರವಾಗಿಡುವ ಜವಾಬ್ದಾರಿ ಪ್ರತಿಯೊಬ್ಬ ನಾಗರಿಕರ ಮೇಲಿದೆ. ಮನೆ ಬಾಗಿಲಿಗೆ ಬರುವ ಕಸ ಸಂಗ್ರಹ ವಾಹನಗಳಿಗೆ ಸಾರ್ವಜನಿಕರು ಹಸಿ ಕಸ ಮತ್ತು ಒಣ ಕಸವನ್ನು ಪ್ರತ್ಯೇಕವಾಗಿ ವಿಂಗಡಿಸಿ ನೀಡಬೇಕು. ಎಲ್ಲೆಂದರಲ್ಲಿ ಕಸ ಎಸೆಯದೆ, ಸ್ವಚ್ಛತಾ ಸಿಬ್ಬಂದಿಗೆ ಸಹಕರಿಸಬೇಕು. ಕಸವನ್ನು ಮೂಲದಲ್ಲಿಯೇ ವಿಂಗಡಿಸುವುದರಿಂದ ವೈಜ್ಞಾನಿಕ ತ್ಯಾಜ್ಯ ನಿರ್ವಹಣೆಗೆ ಅನುಕೂಲವಾಗಲಿದೆ ಎಂದರು.

ಪಟ್ಟಣದ ಸ್ವಚ್ಛತೆ, ಕುಡಿಯುವ ನೀರಿನ ಸಮರ್ಪಕ ನಿರ್ವಹಣೆ ಹಾಗೂ ಅಭಿವೃದ್ಧಿ ಕಾರ್ಯಗಳು ಪರಿಣಾಮಕಾರಿಯಾಗಿ ನಡೆಯಲು ಸಾರ್ವಜನಿಕರ ಸಹಭಾಗಿತ್ವ ಮುಖ್ಯವಾಗಿದೆ. ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಜವಾಬ್ದಾರಿಯನ್ನು ಅರಿತು ಪಟ್ಟಣ ಪಂಚಾಯಿತಿಯೊಂದಿಗೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಓವರ್‌ಹೆಡ್ ಟ್ಯಾಂಕ್‌ಗೆ ಪೈಪ್‌ಲೈನ್ ಅಳವಡಿಸಲು ಆಗ್ರಹಿಸಿ ಪ್ರತಿಭಟನೆ

ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಗ್ರಾಮಸ್ಥರ ಆಕ್ರೋಶ; ಅರ್ಧ ಗ್ರಾಮಕ್ಕೆ ಮಾತ್ರ ಕುಡಿಯುವ ನೀರು ಪೂರೈಕೆ

“ಮುಂಜಾನೆಯ ಮೆರಗು”

ಜಗಳೂರು ನ, 02– ಗ್ರಾಮದ ಓವರ್‌ಹೆಡ್ ಟ್ಯಾಂಕ್‌ಗೆ ಅಗತ್ಯ ಪೈಪ್‌ಲೈನ್ ಅಳವಡಿಸಿ, ಪ್ರತಿಯೊಂದು ಮನೆಗೂ ಸಮರ್ಪಕ ಕುಡಿಯುವ ನೀರಿನ ಸಂಪರ್ಕ ಕಲ್ಪಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ (ಹುಚ್ಚವ್ವನಹಳ್ಳಿ ಮಂಜುನಾಥ್ ಬಣ) ಹಾಗೂ ಹಸಿರು ಸೇನೆ ವತಿಯಿಂದ ತಾಲೂಕಿನ ಚಿಕ್ಕ ಉಜ್ಜಿನಿ ಗ್ರಾಮದಲ್ಲಿ ಪ್ರತಿಭಟನೆ ನಡೆಸಲಾಯಿತು.



ಈ ಸಂದರ್ಭದಲ್ಲಿ ರೈತ ಸಂಘದ ತಾಲೂಕು ಅಧ್ಯಕ್ಷ ಚಿಕ್ಕಮಲ್ಲನಹೊಳೆಯ ಚಿರಂಜೀವಿ ಮಾತನಾಡಿ, ಕ್ಯಾಸೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಿಕ್ಕ ಉಜ್ಜಿನಿ ಗ್ರಾಮದಲ್ಲಿ ಕೊಳವೆಬಾವಿಗಳಲ್ಲಿ ಸಾಕಷ್ಟು ನೀರಿನ ಲಭ್ಯತೆಯಿದ್ದರೂ, ಓವರ್‌ಹೆಡ್ ಟ್ಯಾಂಕ್‌ಗೆ ಅಗತ್ಯ ಪೈಪ್‌ಲೈನ್ ಅಳವಡಿಸುವ ಕಾಮಗಾರಿ ಪೂರ್ಣಗೊಳ್ಳದಿರುವುದು ದುರದೃಷ್ಟಕರ ಸಂಗತಿಯಾಗಿದೆ. ನೀರಿನ ಮೂಲವಿದ್ದರೂ ಸಮರ್ಪಕ ಪೈಪ್‌ಲೈನ್ ವ್ಯವಸ್ಥೆ ಇಲ್ಲದ ಕಾರಣ ಗ್ರಾಮಸ್ಥರಿಗೆ ಕುಡಿಯುವ ನೀರು ಸಮರ್ಪಕವಾಗಿ ತಲುಪುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಗ್ರಾಮದಲ್ಲಿ ನೀರು ಸರಬರಾಜು ವ್ಯವಸ್ಥೆ ಸಮರ್ಪಕವಾಗಿಲ್ಲದ ಕಾರಣ ಅರ್ಧ ಭಾಗದ ಜನರಿಗೆ ಮಾತ್ರ ನೀರು ದೊರೆಯುತ್ತಿದೆ. ಉಳಿದ ಅರ್ಧ ಭಾಗದ ನಿವಾಸಿಗಳು ಕುಡಿಯುವ ನೀರಿಗಾಗಿ ಪ್ರತಿನಿತ್ಯ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಬೇಸಿಗೆಯ ಸಂದರ್ಭದಲ್ಲಿ ನೀರಿನ ಸಮಸ್ಯೆ ಮತ್ತಷ್ಟು ತೀವ್ರಗೊಳ್ಳುವ ಆತಂಕ ಗ್ರಾಮಸ್ಥರನ್ನು ಕಾಡುತ್ತಿದೆ. ಕುಡಿಯುವ ನೀರು ಪ್ರತಿಯೊಬ್ಬ ನಾಗರಿಕನ ಮೂಲಭೂತ ಅಗತ್ಯವಾಗಿದ್ದು, ಅದನ್ನು ಒದಗಿಸುವಲ್ಲಿ ಗ್ರಾಮ ಪಂಚಾಯಿತಿ ಆಡಳಿತ ವಿಫಲವಾಗಿರುವುದು ಖಂಡನೀಯ ಎಂದರು.

ಈ ಕುರಿತು ಹಲವು ಬಾರಿ ಗ್ರಾಮ ಪಂಚಾಯಿತಿ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಪ್ರಯೋಜನವಾಗಿಲ್ಲ. ಸಮಸ್ಯೆ ಪರಿಹಾರಕ್ಕೆ ಅಧಿಕಾರಿಗಳು ಮುಂದಾಗದೆ ನಿರ್ಲಕ್ಷ್ಯ ವಹಿಸುತ್ತಿರುವುದರಿಂದ ಗ್ರಾಮಸ್ಥರು ಪ್ರತಿಭಟನೆ ನಡೆಸುವ ಅನಿವಾರ್ಯತೆ ಎದುರಾಗಿದೆ. ಸಾರ್ವಜನಿಕರ ತೆರಿಗೆ ಹಣದಲ್ಲಿ ಕೈಗೊಳ್ಳುವ ಕುಡಿಯುವ ನೀರಿನ ಕಾಮಗಾರಿಗಳು ಅರ್ಧ–ಕ್ಕೆ ನಿಂತರೆ ಜನಸಾಮಾನ್ಯರಿಗೆ ಹೇಗೆ ಅನುಕೂಲವಾಗಲಿದೆ ಎಂದು ಪ್ರಶ್ನಿಸಿದರು.

ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ವಾಸ್ತವ ಸ್ಥಿತಿಯನ್ನು ಪರಿಶೀಲಿಸಬೇಕು. ಅಪೂರ್ಣಗೊಂಡಿರುವ ಪೈಪ್‌ಲೈನ್ ಕಾಮಗಾರಿಯನ್ನು ಕೂಡಲೇ ಪೂರ್ಣಗೊಳಿಸಿ, ಓವರ್‌ಹೆಡ್ ಟ್ಯಾಂಕ್‌ನಿಂದ ಗ್ರಾಮದ ಎಲ್ಲ ಬಡಾವಣೆಗಳಿಗೂ ಸಮರ್ಪಕವಾಗಿ ನೀರು ಪೂರೈಕೆಯಾಗುವಂತೆ ಕ್ರಮ ಕೈಗೊಳ್ಳಬೇಕು. ಜನರ ಕುಡಿಯುವ ನೀರಿನ ಸಮಸ್ಯೆಯನ್ನು ನಿರ್ಲಕ್ಷಿಸಿದರೆ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಮುಂದಿನ ದಿನಗಳಲ್ಲಿ ಇನ್ನಷ್ಟು ತೀವ್ರ ಸ್ವರೂಪದ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಗ್ರಾಮದ ರೈತ ಮುಖಂಡ ಹನುಮಂತಪ್ಪ ಮಾತನಾಡಿ, ಓವರ್‌ಹೆಡ್ ಟ್ಯಾಂಕ್ ನಿರ್ಮಾಣವಾಗಿದ್ದರೂ ಅದರಿಂದ ಗ್ರಾಮದ ಎಲ್ಲ ಮನೆಗಳಿಗೂ ನೀರು ತಲುಪಿಸುವ ವ್ಯವಸ್ಥೆ ಸಮರ್ಪಕವಾಗಿಲ್ಲ. ಪೈಪ್‌ಲೈನ್ ಅಳವಡಿಕೆ ಪೂರ್ಣಗೊಳ್ಳದಿರುವುದರಿಂದ ಅರ್ಧ ಗ್ರಾಮದ ಜನರು ನೀರಿಗಾಗಿ ಸಂಕಷ್ಟ ಅನುಭವಿಸುತ್ತಿದ್ದಾರೆ. ಅಧಿಕಾರಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿದರೂ ಸಮಸ್ಯೆ ಬಗೆಹರಿದಿಲ್ಲ. ಜನರ ಮೂಲಭೂತ ಸೌಕರ್ಯವಾದ ಕುಡಿಯುವ ನೀರಿನ ವಿಚಾರದಲ್ಲಾದರೂ ಅಧಿಕಾರಿಗಳು ಜವಾಬ್ದಾರಿಯಿಂದ ನಡೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ರೈತ ಸಂಘ ಹಾಗೂ ಹಸಿರು ಸೇನೆಯ ಮುಖಂಡರು, ರೈತರು ಮತ್ತು ಗ್ರಾಮಸ್ಥರು ಭಾಗವಹಿಸಿ, ಕೂಡಲೇ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸುವಂತೆ ಒತ್ತಾಯಿಸಿದರು.

ನಿರುದ್ಯೋಗಿ ಯುವಕರಿಗೆ ಸಾರಥಿ ಯೋಜನೆ ವರದಾನ: ಎಂ.ಡಿ. ಕೀರ್ತಿಕುಮಾರ್



“ಮುಂಜಾನೆಯ ಮೆರಗು”

ಜಗಳೂರು ನ, 02– ನಿರುದ್ಯೋಗಿ ಯುವಕರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಸಾರಥಿ ಯೋಜನೆಯು ವರದಾನವಾಗಲಿದೆ ಎಂದು ಕೆಪಿಸಿಸಿ ಎಸ್‌ಟಿ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ.ಡಿ. ಕೀರ್ತಿಕುಮಾರ್ ಹೇಳಿದರು.

ತಾಲೂಕಿನ ಬಸವನಕೋಟೆ ಗ್ರಾಮದ ಕಾಂಗ್ರೆಸ್ ಮುಖಂಡ ಪ್ರಕಾಶ್ ಅವರ ಪುತ್ರ ಚಂದು ಕೆ.ಎಂ. ಅವರು ಸ್ವಾವಲಂಬಿ ಸಾರಥಿ ಯೋಜನೆಯಡಿ ಫಲಾನುಭವಿಯಾಗಿ ಆಯ್ಕೆಯಾಗಿ ನೂತನ ವಾಹನ ಖರೀದಿಸಿದ ಹಿನ್ನೆಲೆಯಲ್ಲಿ ಅವರನ್ನು ಅಭಿನಂದಿಸಿ ಮಾತನಾಡಿದರು.

ಸರ್ಕಾರದ ಇಂತಹ ಯೋಜನೆಗಳು ನಿರುದ್ಯೋಗಿ ಯುವಕರಿಗೆ ಸ್ವಂತ ಉದ್ಯೋಗ ಆರಂಭಿಸಲು ಆರ್ಥಿಕ ನೆರವು ನೀಡುವುದರ ಜತೆಗೆ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಸಹಕಾರಿಯಾಗಲಿವೆ. ಯುವಕರು ಯೋಜನೆಗಳ ಸದುಪಯೋಗ ಪಡೆದುಕೊಂಡು ಉದ್ಯೋಗ ಸೃಷ್ಟಿಯತ್ತ ಗಮನಹರಿಸಬೇಕು ಎಂದರು.

ಈ ಸಂದರ್ಭದಲ್ಲಿ ಚಂದು ಅವರಿಗೆ ಸಿಹಿ ತಿನ್ನಿಸಿ ನೂತನ ವಾಹನದೊಂದಿಗೆ ಶುಭ ಹಾರೈಸಿದರು. ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಲೋಕೋಪಯೋಗಿ ಇಲಾಖೆ ನಿರ್ಲಕ್ಷ್ಯಕ್ಕೆ ಸಾರ್ವಜನಿಕರ ಆಕ್ರೋಶ; ಹದಗೆಟ್ಟ ರಸ್ತೆಯಲ್ಲಿ ವಾಹನ ಸವಾರರ ಪರದಾಟ

“ಮುಂಜಾನೆಯ ಮೆರಗು”

ಜಗಳೂರು ನ, 08– ತಾಲೂಕಿನ ಹೊಸಕೆರೆಯಿಂದ ಮಡ್ರಳ್ಳಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಸಂಪೂರ್ಣ ಹದಗೆಟ್ಟಿದ್ದು, ಐತಿಹಾಸಿಕ ಹಾಗೂ ಧಾರ್ಮಿಕ ಮಹತ್ವ ಹೊಂದಿರುವ ಮಡ್ರಳ್ಳಿ ಚೌಡಮ್ಮನ ಸನ್ನಿಧಾನಕ್ಕೆ ತೆರಳುವ ಭಕ್ತರು, ಸಾರ್ವಜನಿಕರು ಮತ್ತು ವಾಹನ ಸವಾರರು ತೀವ್ರ ತೊಂದರೆ ಅನುಭವಿಸುವಂತಾಗಿದೆ.

ಮಡ್ರಳ್ಳಿ ಚೌಡಮ್ಮನ ದೇವಸ್ಥಾನಕ್ಕೆ ಪ್ರತಿನಿತ್ಯ ನೂರಾರು ಭಕ್ತರು ಹಾಗೂ ಪ್ರವಾಸಿಗರು ಭೇಟಿ ನೀಡುತ್ತಾರೆ. ಅಲ್ಲದೆ, ಈ ರಸ್ತೆಯಲ್ಲಿ ಪ್ರತಿದಿನ ನೂರಾರು ವಾಹನಗಳು ಸಂಚರಿಸುತ್ತವೆ. ಆದ–ರೆ ರಸ್ತೆ ಅಭಿವೃದ್ಧಿಗೆ ಸಂಬಂಧಿಸಿದಂತೆ ಲೋಕೋಪಯೋಗಿ ಇಲಾಖೆ ಅಗತ್ಯ ಕ್ರಮ ಕೈಗೊಳ್ಳದಿರುವುದರಿಂದ ರಸ್ತೆಯ ಸ್ಥಿತಿ ದಿನದಿಂದ ದಿನಕ್ಕೆ ಹದಗೆಡುತ್ತಿದೆ ಎಂಬ ಆರೋಪ ಕೇಳಿಬರುತ್ತಿದೆ.

ರಸ್ತೆಯುದ್ದಕ್ಕೂ ಗುಂಡಿಗಳು ನಿರ್ಮಾಣವಾಗಿದ್ದು, ಕೆಲವೆಡೆ ಡಾಂಬರು ಕಿತ್ತುಹೋಗಿ ಮಣ್ಣಿನ ರಸ್ತೆಯಂತಾಗಿದೆ. ಮಳೆ ಬಂದ ಸಂದರ್ಭದಲ್ಲಿ ಕೆಸರು ತ

ಭದ್ರಾ ಅಚ್ಚುಕಟ್ಟು ಕೊನೆಭಾಗದ ರೈತರಿಗೆ ನೀರು ತಲುಪಿಸಲು ಕ್ರಮ: ಸಚಿವ ಎಸ್.ಎಸ್.ಮಲ್ಲಿಕಾರ್ಜುನ್

"ಮುಂಜಾನೆಯ ಮೆರಗು"

ದಾವಣಗೆರೆ ನ, 02– ಭದ್ರಾ ಅಚ್ಚುಕಟ್ಟು ಪ್ರದೇಶದ ಕೊನೆಭಾಗದ ರೈತರು ಎದುರಿಸುತ್ತಿರುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ಎಸ್. ಎಸ್. ಮಲ್ಲಿಕಾರ್ಜುನ್ ಭರವಸೆ ನೀಡಿದರು.

ಭದ್ರಾ ಅಚ್ಚುಕಟ್ಟು ಪ್ರದೇಶದ ಕೊನೆಭಾಗದ ರೈತರು ನೀರಿನ ಕೊರತೆ ಖಂಡಿಸಿ ನಡೆಸುತ್ತಿರುವ ಪ್ರತಿಭಟನಾ ಸ್ಥಳಕ್ಕೆ ಖುದ್ದಾಗಿ ಭೇಟಿ ನೀಡಿದ ಸಚಿವರು, ರೈತರೊಂದಿಗೆ ನೇರವಾಗಿ ಮಾತುಕತೆ ನಡೆಸಿ ಅವರ ಸಮಸ್ಯೆಗಳು, ಅಹವಾಲುಗಳು ಹಾಗೂ ಬೇಡಿಕೆಗಳನ್ನು ಆಲಿಸಿದರು.



ಕೃಷಿ ಚಟುವಟಿಕೆಗಳಿಗೆ ಸಮರ್ಪಕವಾಗಿ ನೀರು ದೊರೆಯದ ಹಿನ್ನೆಲೆಯಲ್ಲಿ ರೈತರು ಎದುರಿಸುತ್ತಿರುವ ಸಂಕಷ್ಟಗಳ ಕುರಿತು ಮಾಹಿತಿ ಪಡೆದ ಅವರು, ನೀರಾವರಿ ವ್ಯವಸ್ಥೆ ಹಾಗೂ ನೀರಿನ ಸಮರ್ಪಕ ಹಂಚಿಕೆ ಕುರಿತು ರೈತ ಮುಖಂಡರೊಂದಿಗೆ ಚರ್ಚಿಸಿದರು.

ರೈತರ ಸಮಸ್ಯೆಗಳ ಗಂಭೀರತೆಯನ್ನು ಮುಖ್ಯಮಂತ್ರಿಗಳ ಗಮನಕ್ಕೆ ತರುವ ಉದ್ದೇಶದಿಂದ ಸ್ಥಳದಿಂದಲೇ ದೂರವಾಣಿ ಮೂಲಕ ಮುಖ್ಯಮಂತ್ರಿಗಳೊಂದಿಗೆ ಸಮಾಲೋಚನೆ ನಡೆಸಿದರು. ಭದ್ರಾ ಅಚ್ಚುಕಟ್ಟು ಪ್ರದೇಶದ ಕೊನೆಭಾಗದ ರೈತರ ಜಮೀನುಗಳಿಗೆ ಸಮರ್ಪಕವಾಗಿ ನೀರು ತಲುಪಿಸುವ ಕುರಿತು ಚರ್ಚಿಸಿ, ರೈತರ ಅಹವಾಲುಗಳಿಗೆ ಸ್ಪಂದಿಸುವಂತೆ ಮನವಿ ಮಾಡಿದರು.

ಅನ್ನದಾತರ ಹಿತಾಸಕ್ತಿ ಕಾಪಾಡುವುದು ಸರ್ಕಾರದ ಪ್ರಮುಖ ಆದ್ಯತೆಯಾಗಿದೆ. ರೈತರ ನ್ಯಾಯಯುತ ಬೇಡಿಕೆಗಳಿಗೆ ಸ್ಪಂದಿಸಿ, ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸುವ ಮೂಲಕ ನೀರಿನ ಸಮಸ್ಯೆಗೆ ಸೂಕ್ತ ಪರಿಹಾರ ಕಂಡುಕೊಳ್ಳಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಸಚಿವರು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲೆಯ ರೈತ ಮುಖಂಡರು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

ಸಮಸ್ಯೆಗಳಿಗೆ ಶೀಘ್ರ ಪರಿಹಾರ ಕಲ್ಪಿಸಲು ಶಾಸಕ ಶಿವಗಂಗಾ ಬಸವರಾಜು ಸೂಚನೆ



"ಮುಂಜಾನೆಯ ಮೆರಗು"

ದಾವಣಗೆರೆ ನ, 02– ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ, ನ್ಯಾಯಯುತ ಪರಿಹಾರ ಕಲ್ಪಿಸುವುದು ತಮ್ಮ ಪ್ರಮುಖ ಜವಾಬ್ದಾರಿಯಾಗಿದೆ ಎಂದು ಶಾಸಕ ಶಿವಗಂಗಾ ಬಸವರಾಜು ತಿಳಿಸಿದರು.

ಇಂದು ದಾವಣಗೆರೆಯ ತಮ್ಮ ಗೃಹ ಕಚೇರಿಯಲ್ಲಿ ಸಾರ್ವಜನಿಕರನ್ನು ಆತ್ಮೀಯವಾಗಿ ಭೇಟಿ ಮಾಡಿದ ಶಾಸಕರು, ಜನರ ವಿವಿಧ ಕುಂದುಕೊರತೆಗಳು ಹಾಗೂ ಸಮಸ್ಯೆಗಳನ್ನು ತಾಳ್ಮೆಯಿಂದ ಆಲಿಸಿ, ಅವರು ಸಲ್ಲಿಸಿದ ಅಹವಾಲುಗಳ ಕುರಿತು ಅಗತ್ಯ ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಸಾರ್ವಜನಿಕರು ತಮ್ಮ ವೈಯಕ್ತಿಕ ಹಾಗೂ ಸ್ಥಳೀಯ ಸಮಸ್ಯೆಗಳನ್ನು ಶಾಸಕರ ಗಮನಕ್ಕೆ ತಂದರು. ಅಹವಾಲುಗಳಿಗೆ ಸಂಬಂಧಿಸಿದಂತೆ ಸ್ಥಳದಲ್ಲಿದ್ದ ಹಾಗೂ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳೊಂದಿಗೆ ಚರ್ಚಿಸಿದ ಶಾಸಕರು, ಪ್ರತಿಯೊಂದು ಸಮಸ್ಯೆಯನ್ನೂ ಸಮಗ್ರವಾಗಿ ಪರಿಶೀಲಿಸಿ, ನಿಯಮಾನುಸಾರ ಶೀಘ್ರ ಹಾಗೂ ಸೂಕ್ತ ಪರಿಹಾರ ಒದಗಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ಜನಪ್ರತಿನಿಧಿಯಾಗಿ ಜನರ ಸಂಕಷ್ಟಗಳಿಗೆ ಸ್ಪಂದಿಸುವುದು ಕೇವಲ ಕರ್ತವ್ಯವಲ್ಲ, ಅದಕ್ಕಿಂತಲೂ ಮಿಗಿಲಾಗಿ ಜವಾಬ್ದಾರಿಯಾಗಿದೆ. ಜನರು ಇಟ್ಟಿರುವ ವಿಶ್ವಾಸಕ್ಕೆ ಸದಾ ಬೆಲೆ ನೀಡುತ್ತೇನೆ. ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುವುದರ ಜೊತೆಗೆ ನ್ಯಾಯಯುತ ಪರಿಹಾರ ಕಲ್ಪಿಸಲು ಬದ್ಧನಾಗಿದ್ದೇನೆ ಎಂದು ಶಾಸಕ ಶಿವಗಂಗಾ ಬಸವರಾಜು ತಿಳಿಸಿದರು.

ಪೊಲೀಸ್ ಸಿಬ್ಬಂದಿಯ ವಸತಿ ಸೌಲಭ್ಯಕ್ಕೆ ಮತ್ತಷ್ಟು ಬಲ 10.97 ಕೋಟಿ ವೆಚ್ಚದಲ್ಲಿ 36 ನೂತನ ವಸತಿ ಗೃಹ ಉದ್ಘಾಟನೆ

"ಮುಂಜಾನೆಯ ಮೆರಗು"

ಹೊಸಪೇಟೆ ನ, 02– ಪೊಲೀಸ್ ಸಿಬ್ಬಂದಿಗೆ ಉತ್ತಮ ವಸತಿ ಸೌಲಭ್ಯ ಕಲ್ಪಿಸುವ ಮೂಲಕ ಅವರ ಜೀವನಮಟ್ಟ ಸುಧಾರಣೆ ಹಾಗೂ ಕರ್ತವ್ಯ ನಿರ್ವಹಣೆಗೆ ಪೂರಕ ವಾತಾವರಣ ನಿರ್ಮಿಸುವುದು ಸರ್ಕಾರದ ಪ್ರಮುಖ ಆದ್ಯತೆಯಾಗಿದೆ ಎಂದು ಸಚಿವ ಕೆ.ಎಸ್. ಬಸವಂತಪ್ಪ ಹೇಳಿದರು.

ವಿಜಯನಗರ ಜಿಲ್ಲಾ ಪೊಲೀಸ್ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಪೊಲೀಸ್ ವಸತಿ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ನಿಗಮದ ವತಿಯಿಂದ ಹೊಸಪೇಟೆ ನಗರದಲ್ಲಿ 10.97 ಕೋಟಿ ವೆಚ್ಚದಲ್ಲಿ ನಿರ್ಮಿಸಿರುವ 36 ನೂತನ ಪೊಲೀಸ್ ಸಿಬ್ಬಂದಿಗಳ ವಸತಿ ಗೃಹಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪೊಲೀಸ್ ಇಲಾಖೆಯ ಸಿಬ್ಬಂದಿ ಹಗಲಿರುಳು ಸಾರ್ವಜನಿಕರ ರಕ್ಷಣೆ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ಮಹತ್ವದ ಜವಾಬ್ದಾರಿ ನಿರ್ವಹಿಸುತ್ತಿದ್ದಾರೆ. ಇಂತಹ ಸಿಬ್ಬಂದಿಗೆ ಉತ್ತಮ ವಸತಿ ಸೌಲಭ್ಯ ಒದಗಿಸುವುದು ಅತ್ಯಗತ್ಯವಾಗಿದೆ. ಸುಸಜ್ಜಿತ ವಸತಿ ವ್ಯವಸ್ಥೆಯಿಂದ ಸಿಬ್ಬಂದಿ ಹಾಗೂ ಅವರ ಕುಟುಂಬದವರ ಜೀವನಮಟ್ಟ ಸುಧಾರಿಸುವುದರ ಜೊತೆಗೆ, ಕರ್ತವ್ಯವನ್ನು ಹೆಚ್ಚಿನ ನೆಮ್ಮದಿ ಮತ್ತು ಸಮರ್ಪಣಾ ಮನೋಭಾವದಿಂದ ನಿರ್ವಹಿಸಲು ಅನುಕೂಲವಾಗಲಿದೆ ಎಂದರು.



ಪೊಲೀಸ್ ಇಲಾಖೆಯ ಮೂಲಸೌಕರ್ಯ ಅಭಿವೃದ್ಧಿ ಹಾಗೂ ಸಿಬ್ಬಂದಿಯ ಕಲ್ಯಾಣಕ್ಕೆ ಸರ್ಕಾರ ಬದ್ಧವಾಗಿದ್ದು, ಅಗತ್ಯ ಸೌಲಭ್ಯಗಳನ್ನು ಹಂತ ಹಂತವಾಗಿ ಬಲಪಡಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸ್ಥಳೀಯ ಶಾಸಕ ಎಚ್.ಆರ್. ಗವಿಯಪ್ಪ ಸೇರಿದಂತೆ ಪೊಲೀಸ್ ಇಲಾಖೆಯ ಅಧಿಕಾರಿಗಳು ಹಾಗೂ ಹಲವು ಗಣ್ಯರು ಉಪಸ್ಥಿತರಿದ್ದರು.

ಮುಖ್ಯಮಂತ್ರಿಗಳೊಂದಿಗೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ದೂರವಾಣಿ ಸಮಾಲೋಚನೆ



"ಮುಂಜಾನೆಯ ಮೆರಗು"

ದಾವಣಗೆರೆ ನ, 02– ಭದ್ರಾ ಅಚ್ಚುಕಟ್ಟು ಪ್ರದೇಶದ ರೈತರು ಎದುರಿಸುತ್ತಿರುವ ನೀರಿನ ಸಮಸ್ಯೆ ಹಾಗೂ ಈ ಸಂಬಂಧ ನಡೆಯುತ್ತಿರುವ ರೈತರ ಪ್ರತಿಭಟನೆಗೆ ಸ್ಪಂದಿಸಿರುವ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರು ಮುಖ್ಯಮಂತ್ರಿ ಅವರೊಂದಿಗೆ ದೂರವಾಣಿ ಮೂಲಕ ಸಮಾಲೋಚನೆ ನಡೆಸಿದರು.

ಭದ್ರಾ ಅಚ್ಚುಕಟ್ಟು ಪ್ರದೇಶದ ಕೊನೆಭಾಗದ ರೈತರಿಗೆ ಸಮರ್ಪಕವಾಗಿ ನೀರು ದೊರೆಯದಿರುವುದರಿಂದ ಕೃಷಿ ಚಟುವಟಿಕೆಗಳಿಗೆ ತೊಂದರೆಯಾಗಿದ್ದು, ರೈತರು ಪ್ರತಿಭಟನೆ ನಡೆಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳಿಗೆ ನೇರವಾಗಿ ದೂರವಾಣಿ ಕರೆ ಮಾಡಿದ ಸಚಿವರು, ಅಚ್ಚುಕಟ್ಟು ಪ್ರದೇಶದ ನೀರಿನ ಸಮಸ್ಯೆ, ರೈತರ ಸಂಕಷ್ಟ ಹಾಗೂ ಅವರ ಬೇಡಿಕೆಗಳ ಕುರಿತು ವಿವರವಾಗಿ ಚರ್ಚಿಸಿದರು.

ರೈತರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ನೀರಿನ ಸಮರ್ಪಕ ಹಂಚಿಕೆ ಹಾಗೂ ಕೊನೆಭಾಗದ ರೈತರಿಗೂ ನೀರು ತಲುಪಿಸುವ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳುವ ಅಗತ್ಯವನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದರು.

ಈ ಸಂದರ್ಭದಲ್ಲಿ ಜಿಲ್ಲೆಯ ರೈತ ಮುಖಂಡರು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

ವಿಜಯನಗರ ಜಿಲ್ಲೆಯಲ್ಲಿ ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕಲು ಸಚಿವ ಬಸವಂತಪ್ಪ ಸೂಚನೆ ಅಬಕಾರಿ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಕಟ್ಟುನಿಟ್ಟಿನ ಕ್ರಮಕ್ಕೆ ನಿರ್ದೇಶನ

"ಮುಂಜಾನೆಯ ಮೆರಗು"

ವಿಜಯನಗರ ನ, 02– ಜಿಲ್ಲೆಯಲ್ಲಿ ಅಕ್ರಮ ಮದ್ಯ ಮಾರಾಟ ಹಾಗೂ ಇತರೆ ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಸಚಿವ ಕೆ.ಎಸ್. ಬಸವಂತಪ್ಪ ಅವರು ಅಬಕಾರಿ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಜಿಲ್ಲೆಯಲ್ಲಿನ ಪ್ರಸ್ತುತ ಪರಿಸ್ಥಿತಿ ಹಾಗೂ ಅಕ್ರಮ ಚಟುವಟಿಕೆಗಳ ನಿಯಂತ್ರಣಕ್ಕೆ ಕೈಗೊಂಡಿರುವ ಕ್ರಮಗಳ ಕುರಿತು ಸಮಗ್ರವಾಗಿ ಚರ್ಚಿಸಿದರು.

ಜಿಲ್ಲೆಯ ಯಾವುದೇ ಭಾಗದಲ್ಲಿಯೂ ಅಕ್ರಮವಾಗಿ ಮದ್ಯ ಮಾರಾಟ ನಡೆಯದಂತೆ ಅಧಿಕಾರಿಗಳು ಹೆಚ್ಚಿನ ಎಚ್ಚರಿಕೆ ವಹಿಸಬೇಕು. ಅಕ್ರಮ ಮದ್ಯ ಮಾರಾಟದಿಂದ ಸಾರ್ವಜನಿಕರ ಆರೋಗ್ಯ ಮತ್ತು ಸಾಮಾಜಿಕ ವ್ಯವಸ್ಥೆಯ ಮೇಲೆ ಉಂಟಾಗುವ ದುಷ್ಪರಿಣಾಮಗಳನ್ನು ಗಮನದಲ್ಲಿಟ್ಟುಕೊಂಡು, ಇಂತಹ ಚಟುವಟಿಕೆಗಳನ್ನು ಸಂಪೂರ್ಣವಾಗಿ ನಿಯಂತ್ರಿಸಲು ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದರು.



ಅಕ್ರಮ ಮದ್ಯ ಮಾರಾಟದಲ್ಲಿ ತೊಡಗಿರುವ ವ್ಯಕ್ತಿಗಳು ಹಾಗೂ ಇತರೆ ಕಾನೂನುಬಾಹಿರ ಚಟುವಟಿಕೆಗಳಿಗೆ ಬೆಂಬಲ ನೀಡುವವರ ವಿರುದ್ಧ ಯಾವುದೇ ಮುಲಾಜಿಲ್ಲದೆ ಕಾನೂನುಬದ್ಧ ಕ್ರಮ ಜರುಗಿಸಬೇಕು. ಕೇವಲ ದೂರುಗಳು ಬಂದಾಗ ಮಾತ್ರ ಕಾರ್ಯಪ್ರವೃತ್ತರಾಗದೆ, ನಿರಂತರವಾಗಿ ಗಸ್ತು ಮತ್ತು ತಪಾಸಣೆ ನಡೆಸುವ ಮೂಲಕ ಅಕ್ರಮ ಚಟುವಟಿಕೆಗಳ ಮೇಲೆ ನಿಗಾ ವಹಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅಬಕಾರಿ ಇಲಾಖೆಯ ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸುವುದರ ಜೊತೆಗೆ, ಸಾರ್ವಜನಿಕರಿಂದ ಬರುವ ದೂರುಗಳಿಗೆ ತಕ್ಷಣ ಸ್ಪಂದಿಸಿ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಹಾಗೂ ಸಾರ್ವಜನಿಕ ಹಿತಾಸಕ್ತಿ ಕಾಪಾಡಲು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು ಎಂದು ಸಚಿವರು ತಿಳಿಸಿದರು.

ಭರಮಸಾಗರದಲ್ಲಿ ನೂತನ ಪೊಲೀಸ್ ಠಾಣೆ ಉದ್ಘಾಟಿಸಿದ ಸಚಿವ ಟಿ.ರಘುಮೂರ್ತಿ



"ಮುಂಜಾನೆಯ ಮೆರಗು"

ಚಿತ್ರದುರ್ಗ ನ, 02– ಜಿಲ್ಲೆಯ ಭರಮಸಾಗರದಲ್ಲಿ ನೂತನವಾಗಿ ನಿರ್ಮಿಸಲಾದ ಪೊಲೀಸ್ ಠಾಣೆಯನ್ನು ಸಚಿವ ಟಿ.ರಘುಮೂರ್ತಿ ಅವರು ಉದ್ಘಾಟಿಸಿ ಸಾರ್ವಜನಿಕ ಸೇವೆಗೆ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಜನರ ಸುರಕ್ಷತೆ, ಕಾನೂನು ಸುವ್ಯವಸ್ಥೆ ಕಾಪಾಡುವುದು ಹಾಗೂ ಶಾಂತಿಯುತ ಸಮಾಜ ನಿರ್ಮಾಣದಲ್ಲಿ ಪೊಲೀಸ್ ಇಲಾಖೆಯ ಪಾತ್ರ ಮಹತ್ವದ್ದಾಗಿದೆ. ನೂತನ ಪೊಲೀಸ್ ಠಾಣೆಯು ಸ್ಥಳೀಯ ಜನರಿಗೆ ಉತ್ತಮ ಹಾಗೂ ತ್ವರಿತ ಪೊಲೀಸ್ ಸೇವೆ ಒದಗಿಸುವ ಕೇಂದ್ರವಾಗಿ ಕಾರ್ಯನಿರ್ವಹಿಸಬೇಕು. ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಜನಸ್ನೇಹಿ ಪೊಲೀಸ್ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಪೊಲೀಸ್ ಇಲಾಖೆ ಮತ್ತು ಸಾರ್ವಜನಿಕರ ನಡುವಿನ ವಿಶ್ವಾಸದ ಸಂಬಂಧ ಗಟ್ಟಿಗೊಳ್ಳುವುದರಿಂದ ಸಮಾಜದಲ್ಲಿ ಶಾಂತಿ, ಭದ್ರತೆ ಹಾಗೂ ಸುವ್ಯವಸ್ಥೆ ಕಾಪಾಡಲು ಸಾಧ್ಯವಾಗಲಿದೆ. ಈ ನಿಟ್ಟಿನಲ್ಲಿ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಜನಪರ ಕಾಳಜಿಯೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಸಕ ಎಂ.ಚಂದ್ರಪ್ಪ, ಪೊಲೀಸ್ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

ವೈಯಕ್ತಿಕ ದ್ವೇಷದ ರಾಜಕಾರಣ ಖಂಡನೀಯ: ಸಚಿವ ಟಿ. ರಘುಮೂರ್ತಿ

"ಮುಂಜಾನೆಯ ಮೆರಗು"

ಚಿತ್ರದುರ್ಗ ನ, 02– ಅಧಿಕಾರ ಹಾಗೂ ರಾಜಕೀಯ ಲಾಭದ ಉದ್ದೇಶದಿಂದ ವಿರೋಧ ಪಕ್ಷಗಳು ವೈಯಕ್ತಿಕ ದ್ವೇಷದ ರಾಜಕಾರಣ ಮಾಡುತ್ತಿರುವುದು ಖಂಡನೀಯ ಎಂದು ಸಚಿವ ಟಿ. ರಘುಮೂರ್ತಿ ಹೇಳಿದರು.

ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಕೆಲವು ದಿನಗಳಿಂದ ರಾಜ್ಯದಲ್ಲಿ ನಿರಂತರವಾಗಿ ಅಪಪ್ರಚಾರ ಹಾಗೂ ರಾಜಕೀಯ ಪ್ರೇರಿತ ಹೇಳಿಕೆಗಳನ್ನು ನೀಡಲಾಗುತ್ತಿದೆ. ಸುದೀರ್ಘ ಕಾಲ ಮುಖ್ಯಮಂತ್ರಿಯಾಗಿ ಹಾಗೂ ವಿರೋಧ ಪಕ್ಷದ ನಾಯಕರಾಗಿ ಸೇವೆ ಸಲ್ಲಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಘನತೆಗೆ ಧಕ್ಕೆ ತರುವ ಪ್ರಯತ್ನಗಳು ನಡೆಯುತ್ತಿರುವುದು ಸರಿಯಲ್ಲ ಎಂದು ಆಕ್ಷೇಪಿಸಿದರು.

ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರು ರಾಜಕೀಯ ಲಾಭಕ್ಕಾಗಿ ಕಟ್ಟುಕಥೆಗಳನ್ನು ಸೃಷ್ಟಿಸುತ್ತಿದ್ದಾರೆ ಎಂದು ಆರೋಪಿಸಿದ ಅವರು, ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರಂತಹ ಜವಾಬ್ದಾರಿಯುತ ನಾಯಕರ ವಿರುದ್ಧವೂ ಕೀಳುಮಟ್ಟದ ಹೇಳಿಕೆಗಳನ್ನು ನೀಡುತ್ತಿರುವುದು ಸರಿಯಲ್ಲ ಎಂದರು.

'ಬಲಿತ–ದಲಿತ' ಎಂಬ ಪದಗಳನ್ನು ಬಳಸಿಕೊಂಡು ಸಮಾಜದಲ್ಲಿ ಗೊಂದಲ ಸೃಷ್ಟಿಸುವ ಪ್ರಯತ್ನ ನಡೆಯುತ್ತಿದೆ. ದಲಿತ ಸಮುದಾಯದ ನಾಯಕರು ಅಧಿಕಾರದಲ್ಲಿದ್ದಾಗ ಅವರ ಕಾರ್ಯವೈಖರಿಯನ್ನು ರಾಜಕೀಯ ಉದ್ದೇಶಕ್ಕೆ ಬಳಸಿಕೊಳ್ಳುವುದು ಸರಿಯಲ್ಲ ಎಂದು ಅಭಿಪ್ರಾಯಪಟ್ಟರು.

ಇತ್ತೀಚೆಗೆ ಕೇಳಿಬಂದಿರುವ ಫೋನ್ ಟ್ಯಾಪಿಂಗ್ ಹಾಗೂ ಕದ್ದಾಲಿಕೆ ಆರೋಪಗಳ ಕುರಿತು ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ತನಿಖೆಯ ಪ್ರಗತಿ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ. 'ಸ್ಪಿಂಗ್' ಪ್ರಕರಣಕ್ಕೆ ಸಂಬಂಧಿಸಿದಂತೆ ಮೊಬೈಲ್ ಖರೀದಿ, ಕೃತ್ಯದಲ್ಲಿ ಭಾಗಿಯಾದವರು ಹಾಗೂ ಅದರ ಹಿಂದಿರುವವರ



ವಿವರಗಳು ತನಿಖೆಯಿಂದ ಹೊರಬರುತ್ತಿವೆ. ಪ್ರಕರಣದಲ್ಲಿ ಕಾನೂನು ತನ್ನದೇ ಆದ ರೀತಿಯಲ್ಲಿ ಕ್ರಮ ಕೈಗೊಳ್ಳಲಿದೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಚಿತ್ರದುರ್ಗ ಶಾಸಕ ಕೆ.ಸಿ. ವೀರೇಂದ್ರ (ಪಪ್ಪಿ) ಉಪಸ್ಥಿತರಿದ್ದರು.

ದೆಹಲಿಯಲ್ಲಿ ರಾಹುಲ್ ಗಾಂಧಿ ಭೇಟಿ ಮಾಡಿದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ



"ಮುಂಜಾನೆಯ ಮೆರಗು"

ನವದೆಹಲಿ ನ, 02– ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ದೆಹಲಿಯಲ್ಲಿ ಭೇಟಿ ಮಾಡಿ ಮಾತುಕತೆ ನಡೆಸಿದರು.

ಈ ಸಂದರ್ಭದಲ್ಲಿ ರಾಜ್ಯದಲ್ಲಿ ನಡೆಯುತ್ತಿರುವ ಎಸ್ಐಆರ್ (ವಿಶೇಷ ತೀವ್ರ ಪರಿಷ್ಕರಣೆ) ಪ್ರಕ್ರಿಯೆ ವಿರುದ್ಧದ ಹೋರಾಟ, ರಾಜ್ಯದ ಪ್ರಸ್ತುತ ರಾಜಕೀಯ ವಿದ್ಯಮಾನಗಳು ಸೇರಿದಂತೆ ಹಲವು ಪ್ರಮುಖ ವಿಷಯಗಳ ಕುರಿತು ಚರ್ಚೆ ನಡೆಸಲಾಯಿತು.

ಎಸ್ಐಆರ್ ವಿರುದ್ಧ ಕೈಗೊಳ್ಳಬೇಕಾದ ಮುಂದಿನ ಹೋರಾಟದ ರೂಪುರೇಷೆಗಳು, ಪಕ್ಷದ ಸಂಘಟನಾತ್ಮಕ ವಿಚಾರಗಳು ಹಾಗೂ ರಾಜ್ಯದ ರಾಜಕೀಯ ಬೆಳವಣಿಗೆಗಳ ಕುರಿತು ಉಭಯ ನಾಯಕರು ಸಮಾಲೋಚನೆ ನಡೆಸಿದರು ಎಂದು ತಿಳಿದುಬಂದಿದೆ.

ಬರದ ಸಂಕಷ್ಟದಲ್ಲೂ ರೈತರ ಹಿತಾಸಕ್ತಿಗೆ ಆದ್ಯತೆ: ಸಚಿವ ಕೆ.ಎಸ್. ಬಸವಂತಪ್ಪ

"ಮುಂಜಾನೆಯ ಮೆರಗು"

ವಿಜಯನಗರ ನ, 02– ಜಿಲ್ಲೆಯಾದ್ಯಂತ ಮಳೆ ಕೊರತೆಯಿಂದ ಉಂಟಾಗಿರುವ ಬರ ಪರಿಸ್ಥಿತಿಯನ್ನು ಗಂಭೀರವಾಗಿ ಪರಿಗಣಿಸಿರುವ ಸರ್ಕಾರ, ರೈತರು ಹಾಗೂ ಗ್ರಾಮೀಣ ಜನರ ನೆರವಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತಿದೆ. ಬರದ ಸಂಕಷ್ಟದ ನಡುವೆಯೂ ರೈತರ ಹಿತಾಸಕ್ತಿ ಕಾಪಾಡುವುದು ಮತ್ತು ಅವರಿಗ

2ನೇ ವೈದ್ಯಕೀಯ ಸಾಹಿತ್ಯ ಸಮ್ಮೇಳನ–2026ರ ಲಾಂಛನ, ಕಿರುಹೊತ್ತಿಗೆ ಬಿಡುಗಡೆ ಮಾಡಿದ ಸಿಎಂ ಡಿ.ಕೆ. ಶಿವಕುಮಾರ್



"ಮುಂಜಾನೆಯ ಮೆರಗು"

ಬೆಂಗಳೂರು ನ, 02– ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ವತಿಯಿಂದ ಆಯೋಜಿಸಲಾಗುತ್ತಿರುವ 2ನೇ ವೈದ್ಯಕೀಯ ಸಾಹಿತ್ಯ ಸಮ್ಮೇಳನ–2026ಕ್ಕೆ ಸಿದ್ಧತೆಗಳು ಆರಂಭವಾಗಿದ್ದು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸಮ್ಮೇಳನದ ಕಿರುಹೊತ್ತಿಗೆ ಹಾಗೂ ಅಧಿಕೃತ ಲಾಂಛನವನ್ನು ಬಿಡುಗಡೆ ಮಾಡಿದರು.

ನಗರದ ಗೃಹ ಕಚೇರಿ ಕೃಷ್ಣಾದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕಿರುಹೊತ್ತಿಗೆ ಹಾಗೂ ಲಾಂಛನ ಬಿಡುಗಡೆಗೊಳಿಸಿದ ಮುಖ್ಯಮಂತ್ರಿಗಳು, ವೈದ್ಯಕೀಯ ಕ್ಷೇತ್ರದಲ್ಲಿ ಜ್ಞಾನ ವಿನಿಮಯ, ಸಂಶೋಧನೆ ಹಾಗೂ ಸಾಹಿತ್ಯಿಕ ಚಟುವಟಿಕೆಗಳಿಗೆ ಇಂತಹ ಸಮ್ಮೇಳನಗಳು ವೇದಿಕೆಯಾಗಲಿವೆ ಎಂಬ ಆಶಯ ವ್ಯಕ್ತಪಡಿಸಿದರು.

ವೈದ್ಯಕೀಯ ಕ್ಷೇತ್ರದಲ್ಲಿ ನಿರಂತರವಾಗಿ ನಡೆಯುತ್ತಿರುವ ಸಂಶೋಧನೆಗಳು, ಹೊಸ ಚಿಕಿತ್ಸಾ ವಿಧಾನಗಳು ಹಾಗೂ ಆರೋಗ್ಯ ಸೇವೆಗಳ ಸುಧಾರಣೆ ಕುರಿತು ವೈದ್ಯಕೀಯ ವೃತ್ತಿಪರರು ತಮ್ಮ ಅನುಭವ ಮತ್ತು ಜ್ಞಾನವನ್ನು ಹಂಚಿಕೊಳ್ಳಲು ಸಮ್ಮೇಳನ ಸಹಕಾರಿಯಾಗಲಿದೆ.

ಈ ಸಂದರ್ಭದಲ್ಲಿ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವ ಡಾ. ಶರಣಪ್ರಕಾಶ್ ಪಾಟೀಲ್, ಮುಖ್ಯಮಂತ್ರಿಗಳ ಪ್ರಧಾನ ಸಲಹೆಗಾರ ಹಾಗೂ ರಾಜ್ಯಸಭಾ ಸದಸ್ಯ ಜಿ.ಸಿ. ಚಂದ್ರಶೇಖರ್, ಶಾಸಕರಾದ ಎ.ಆರ್. ಕೃಷ್ಣಮೂರ್ತಿ, ಡಾ. ಎನ್.ಟಿ. ಶ್ರೀನಿವಾಸ್, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ. ಭಗವಾನ್ ಬಿ.ಸಿ., ಡಾ. ಬಿ.ಟಿ. ರುದ್ರೇಶ್, ಡಾ. ವಸುಂಧರಾ ಭೂಪತಿ, ಮಾಜಿ ಶಾಸಕರಾದ ಐವಾನ್ ನಿಗ್ಲಿ, ಡಾ. ಸರೋಜಾ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಮೊಹಮ್ಮದ್ ಮೊಹ್ಸಿನ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಹಾಲಿನ ಖರೀದಿ ದರ ಹೆಚ್ಚಳಕ್ಕೆ ಕೆಎಂಎಫ್ ಹಾಗೂ ಜಿಲ್ಲಾ ಹಾಲು ಒಕ್ಕೂಟಗಳಿಂದ ಸಿಎಂಗೆ ಅಭಿನಂದನೆ



"ಮುಂಜಾನೆಯ ಮೆರಗು"

ಬೆಂಗಳೂರು ನ, 02– ರಾಜ್ಯ ಸರ್ಕಾರ ಹಾಲಿನ ಖರೀದಿ ದರ ಹೆಚ್ಚಿಸಿರುವ ನಿರ್ಧಾರಕ್ಕೆ ಕೆಎಂಎಫ್ ಹಾಗೂ ವಿವಿಧ ಜಿಲ್ಲಾ ಹಾಲು ಒಕ್ಕೂಟಗಳ ಪದಾಧಿಕಾರಿಗಳು ಸಂತಸ ವ್ಯಕ್ತಪಡಿಸಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಧನ್ಯವಾದ ಸಲ್ಲಿಸಿದರು.

ನಗರದ ಗೃಹ ಕಚೇರಿ ಕೃಷ್ಣಾದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಯಾದ ಕೆಎಂಎಫ್ ಹಾಗೂ ವಿವಿಧ ಜಿಲ್ಲಾ ಹಾಲು ಒಕ್ಕೂಟಗಳ ಪದಾಧಿಕಾರಿಗಳು, ಸರ್ಕಾರದ ದರ ಪರಿಷ್ಕರಣೆ ನಿರ್ಧಾರಕ್ಕೆ ಅಭಿನಂದನೆ ಸಲ್ಲಿಸಿದರು.

ರಾಜ್ಯ ಸರ್ಕಾರದ ಈ ನಿರ್ಧಾರದಿಂದ ಇತಿಹಾಸದಲ್ಲೇ ಮೊದಲ ಬಾರಿಗೆ ಪ್ರತಿ ಲೀಟರ್ ಹಾಲಿನ ಖರೀದಿ ದರದಲ್ಲಿ ರೈತರಿಗೆ 7 ಹೆಚ್ಚಳ ಮಾಡಲಾಗಿದೆ. ಗ್ರಾಹಕರಿಗೆ ಅನ್ವಯಿಸುವ ಗರಿಷ್ಠ ಚಿಲ್ಲರೆ ಮಾರಾಟ ದರದಲ್ಲಿಯೂ (ಎಂಆರ್‌ಪಿ) ಪ್ರತಿ ಲೀಟರ್‌ಗೆ 8 ಹೆಚ್ಚಳ ಮಾಡಲಾಗಿದೆ. ಇದರಿಂದ ರಾಜ್ಯದ ಸುಮಾರು 11 ಲಕ್ಷ ಹೈನುಗಾರ ರೈತ ಕುಟುಂಬಗಳಿಗೆ ಅನುಕೂಲವಾಗಲಿದ್ದು, ಅವರ ಆರ್ಥಿಕ ಸಬಲೀಕರಣಕ್ಕೆ ಮತ್ತಷ್ಟು ನೆರವಾಗಲಿದೆ ಎಂದು ಹಾಲು ಒಕ್ಕೂಟಗಳ ಪದಾಧಿಕಾರಿಗಳು ಅಭಿಪ್ರಾಯಪಟ್ಟರು.

ಹೈನುಗಾರಿಕೆ ರಾಜ್ಯದ ಗ್ರಾಮೀಣ ಆರ್ಥಿಕತೆಯ ಪ್ರಮುಖ ಆಧಾರವಾಗಿದ್ದು, ಹಾಲು ಉತ್ಪಾದಕರಿಗೆ ಹೆಚ್ಚಿನ ಆದಾಯ ದೊರೆಯುವಂತೆ ಮಾಡುವ ಸರ್ಕಾರದ ನಿರ್ಧಾರದಿಂದ ರೈತ ಕುಟುಂಬಗಳಿಗೆ ಉತ್ತೇಜನ ದೊರೆಯಲಿದೆ ಎಂದು ಅವರು ಸಂತಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸಚಿವರಾದ ಲಕ್ಷ್ಮಣ ಸವದಿ, ಪುಟ್ಟರಂಗಶೆಟ್ಟಿ, ಶಾಸಕರಾದ ಕೆ.ವೈ. ನಂಜೇಗೌಡ, ಸಿ.ಪಿ. ಯೋಗೇಶ್ವರ್, ಬಮೂಲ್ ಅಧ್ಯಕ್ಷ ಡಿ.ಕೆ. ಸುರೇಶ್, ಮುಖ್ಯಮಂತ್ರಿಗಳ ಮುಖ್ಯ ಸಲಹೆಗಾರ ಜಿ.ಸಿ. ಚಂದ್ರಶೇಖರ್ ಹಾಗೂ ವಿವಿಧ ಜಿಲ್ಲೆಗಳ ಹಾಲು ಉತ್ಪಾದಕರ ಸಂಘಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಹಾಲು, ಮೊಸರು ದರ ಏರಿಕೆ ಖಂಡಿಸಿ ಬಿಜೆಪಿ ಮಹಿಳಾ ಮೋರ್ಚಾ ಪ್ರತಿಭಟನೆ



"ಮುಂಜಾನೆಯ ಮೆರಗು"

ಬೆಂಗಳೂರು ನ, 02– ರಾಜ್ಯದಲ್ಲಿ ಸತತ ನಾಲ್ಕನೇ ಬಾರಿಗೆ ಹಾಲು ಮತ್ತು ಮೊಸರಿನ ದರ ಏರಿಕೆ ಮಾಡಿರುವ ಕಾಂಗ್ರೆಸ್ ಸರ್ಕಾರದ ನಿರ್ಧಾರವನ್ನು ಖಂಡಿಸಿ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ನಗರದ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಕೇಂದ್ರ ಸಚಿವರು ಹಾಗೂ ಸಂಸದೆ ಶೋಭಾ ಕರಂದ್ಲಾಜೆ ಮಾತನಾಡಿ, ಹಾಲು ಮತ್ತು ಮೊಸರಿನ ದರವನ್ನು ಪದೇಪದೇ ಹೆಚ್ಚಿಸುವ ಮೂಲಕ ರಾಜ್ಯ ಸರ್ಕಾರ ಜನಸಾಮಾನ್ಯರ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಹೊರಿಸುತ್ತಿದೆ ಎಂದು ಟೀಕಿಸಿದರು. ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಈಗಾಗಲೇ ಸಂಕಷ್ಟದಲ್ಲಿರುವ ಮಧ್ಯಮ ಹಾಗೂ ಬಡ ಕುಟುಂಬಗಳಿಗೆ ಸರ್ಕಾರದ ಈ ನಿರ್ಧಾರ ಮತ್ತಷ್ಟು ಹೊರೆಯಾಗಲಿದೆ ಎಂದು ಆಕ್ಷೇಪಿಸಿದರು.

ಹಾಲು ಮತ್ತು ಮೊಸರು ಪ್ರತಿಯೊಂದು ಕುಟುಂಬದ ದೈನಂದಿನ ಅಗತ್ಯ ವಸ್ತುಗಳಾಗಿದ್ದು, ಅವುಗಳ ಬೆಲೆ ಏರಿಕೆಯ ಪರಿಣಾಮ ಮಹಿಳೆಯರು ಹಾಗೂ ಗೃಹಿಣಿಯರ ಕುಟುಂಬ ನಿರ್ವಹಣೆಯ ಮೇಲೂ ಬೀರುತ್ತದೆ. ಜನಸಾಮಾನ್ಯರ ಹಿತದೃಷ್ಟಿಯಿಂದ ಸರ್ಕಾರ ಬೆಲೆ ಏರಿಕೆ ನಿರ್ಧಾರವನ್ನು ಮರುಪರಿಶೀಲಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಮಾಜಿ ವಿಧಾನ ಪರಿಷತ್ ಸದಸ್ಯೆ ಭಾರತಿ ಶೆಟ್ಟಿ, ಬಾಲಭವನದ ಮಾಜಿ ಅಧ್ಯಕ್ಷೆ ಪೂರ್ಣಿಮಾ ಪ್ರಕಾಶ್, ಮಹಿಳಾ ಮೋರ್ಚಾದ ಪ್ರಮುಖರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಬಸವಣ್ಣನವರ ಪ್ರತಿಮೆ ಅನಾವರಣ ಸಚಿವ ಈಶ್ವರ ಖಂಡ್ರೆ ಗೌರವ ನಮನ



"ಮುಂಜಾನೆಯ ಮೆರಗು"

ಭಾಲ್ಕಿ ನ, 02– ತಾಲ್ಲೂಕಿನ ಸಿದ್ಧೇಶ್ವರ ಗ್ರಾಮದಲ್ಲಿ ಜಗಜ್ಯೋತಿ, ವಿಶ್ವಗುರು ಬಸವಣ್ಣನವರ ಪ್ರತಿಮೆಯನ್ನು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವ ಈಶ್ವರ ಖಂಡ್ರೆ ಅವರು ಪೂಜ್ಯ ಸ್ವಾಮೀಜಿಗಳು ಹಾಗೂ ಗ್ರಾಮಸ್ಥರ ಸಮ್ಮುಖದಲ್ಲಿ ಉದ್ಘಾಟಿಸಿ ಗೌರವ ನಮನ ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ಗ್ರಾಮದ ಮುಖ್ಯ ಪ್ರವೇಶ ದ್ವಾರವನ್ನೂ ಸಚಿವರು ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಪೂಜ್ಯ ಸ್ವಾಮೀಜಿಗಳು, ಗ್ರಾಮದ ಪ್ರಮುಖರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಈಶ್ವರ ಖಂಡ್ರೆ ಅವರು, ಬಸವಣ್ಣನವರು ಸಾರಿದ ಸಮಾನತೆ, ಕಾಯಕ, ದಾಸೋಹ ಹಾಗೂ ಮಾನವೀಯ ಮೌಲ್ಯಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ. ಜಾತಿ–ಮತಗಳ ಭೇದವಿಲ್ಲದೆ ಎಲ್ಲರೂ ಸಮಾನರು ಎಂಬ ಬಸವಣ್ಣನವರ ಸಂದೇಶ ಸಾರ್ವಕಾಲಿಕವಾದುದು. ಅವರ ವಚನಗಳು ಮತ್ತು ವಿಚಾರಧಾರೆಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಸಮಾನತೆ, ಭ್ರಾತೃತ್ವ ಹಾಗೂ ಸಾಮಾಜಿಕ ಸಾಮರಸ್ಯವನ್ನು ಬಲಪಡಿಸಬೇಕು ಎಂಬ ಆಶಯ ವ್ಯಕ್ತಪಡಿಸಿದರು.

ಸಿದ್ಧೇಶ್ವರ ಗ್ರಾಮದಲ್ಲಿ ಬಸವಣ್ಣನವರ ಪ್ರತಿಮೆ ಸ್ಥಾಪನೆ ಹಾಗೂ ಮುಖ್ಯ ಪ್ರವೇಶ ದ್ವಾರ ನಿರ್ಮಾಣದ ಕಾರ್ಯಕ್ಕೆ ಕೈಜೋಡಿಸಿದ ಜೈರಾಜ ಖಂಡ್ರೆ ಸೇರಿದಂತೆ ಗ್ರಾಮಸ್ಥರನ್ನು ಸಚಿವರು ಅಭಿನಂದಿಸಿದರು.

ಬಸವಣ್ಣನವರ ಆದರ್ಶಗಳು ಸಮಾನತೆ ಮತ್ತು ಮಾನವೀಯತೆಯ ಸಮಾಜ ನಿರ್ಮಾಣಕ್ಕೆ ಸದಾ ಪ್ರೇರಣೆಯಾಗಿವೆ ಎಂಬ ಸಂದೇಶ ಕಾರ್ಯಕ್ರಮದಲ್ಲಿ ಮೂಡಿಬಂತು.

ಹಸಿರು ಬೀದರ ನಿರ್ಮಾಣಕ್ಕೆ ಆದ್ಯತೆ: 7 ಕೋಟಿ ವೆಚ್ಚದ ಅರಣ್ಯ ಭವನ, ಟ್ರೀ ಪಾರ್ಕ್ ಕಾಮಗಾರಿಗಳಿಗೆ ಭೂಮಿಪೂಜೆ

"ಮುಂಜಾನೆಯ ಮೆರಗು"

ಬೀದರ ನ, 02– ಜಿಲ್ಲೆಯ ಹಸಿರು ಪರಿಸರ ಸಂರಕ್ಷಣೆ ಹಾಗೂ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ 7 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಸಚಿವ ಈಶ್ವರ ಖಂಡ್ರೆ ಭೂಮಿಪೂಜೆ ನೆರವೇರಿಸಿದರು.

ನಗರದಲ್ಲಿ 5 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗಲಿರುವ ನೂತನ ಅರಣ್ಯ ಭವನ ಹಾಗೂ 2 ಕೋಟಿ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಿರುವ ನೌಬಾದ್ ಟ್ರೀ ಪಾರ್ಕ್ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಹಸಿರು ಪರಿಸರದ ಕನಸನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಈ ಯೋಜನೆಗಳು ಮಹತ್ವದ ಹೆಜ್ಜೆಯಾಗಿವೆ ಎಂದು ತಿಳಿಸಿದರು.



ಬೀದರ ಜಿಲ್ಲೆಯ ಪ್ರತಿಯೊಂದು ತಾಲ್ಲೂಕಿನಲ್ಲಿಯೂ ತಲಾ 2 ಕೋಟಿ ವೆಚ್ಚದಲ್ಲಿ ಸುಂದರವಾದ ಟ್ರೀ ಪಾರ್ಕ್‌ಗಳನ್ನು ನಿರ್ಮಿಸುವ ಆಶಯ ಹೊಂದಲಾಗಿದೆ. ಹಸಿರು ವಾತಾವರಣದಲ್ಲಿ ಕುಟುಂಬಗಳು, ಮಕ್ಕಳು ಹಾಗೂ ಸಾರ್ವಜನಿಕರು ನೆಮ್ಮದಿಯಿಂದ ಸಮಯ ಕಳೆಯಲು ಅನುಕೂಲವಾಗುವಂತೆ ಈ ಉದ್ಯಾನವನಗಳನ್ನು ಅಭಿವೃದ್ಧಿಪಡಿಸಲಾಗುವುದು ಎಂದರು.

ಭಾಲ್ಕಿ ತಾಲ್ಲೂಕಿನ ಇಂಚೂರು ಟ್ರೀ ಪಾರ್ಕ್ ಈಗಾಗಲೇ ಉದ್ಘಾಟನೆಗೊಂಡಿದ್ದು, ಜಿಲ್ಲೆಯ ಪ್ರಮುಖ ಪ್ರವಾಸಿ ಹಾಗೂ ಕುಟುಂಬ ಮನರಂಜನಾ ತಾಣವಾಗಿ ಜನರ ಆಕರ್ಷಣೆಯ ಕೇಂದ್ರವಾಗಿದೆ. ಇದೇ ಮಾದರಿಯಲ್ಲಿ ಜಿಲ್ಲೆಯ ಎಲ್ಲ ತಾಲ್ಲೂಕುಗಳಲ್ಲಿಯೂ ಸುಂದರ ಟ್ರೀ ಪಾರ್ಕ್‌ಗಳನ್ನು ನಿರ್ಮಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು.

ಮರಗಳನ್ನು ಬೆಳೆಸುವುದಷ್ಟೇ ಪರಿಸರ ಸಂರಕ್ಷಣೆಯ ಉದ್ದೇಶವಲ್ಲ. ಹಸಿರು ಪರಿಸರವನ್ನು ಉಳಿಸಿ, ಮುಂದಿನ ಪೀಳಿಗೆಗೆ ಸ್ವಚ್ಛ, ಸುಂದರ ಹಾಗೂ ಹಸಿರು ಬೀದರವನ್ನು ಕೊಡುಗೆಯಾಗಿ ನೀಡುವುದು ನಮ್ಮ ಸಂಕಲ್ಪವಾಗಿದೆ. ಈ ನಿಟ್ಟಿನಲ್ಲಿ ಅರಣ್ಯ ಅಭಿವೃದ್ಧಿ ಮತ್ತು ಪರಿಸರ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ಸಚಿವರು ತಿಳಿಸಿದರು.

ಎತ್ತಿನಹೊಳೆ ಯೋಜನೆ ಶೀಘ್ರ ಪೂರ್ಣಗೊಳಿಸಲು ಬಿಜೆಪಿ ಅಭ್ಯರ್ಥಿಯನ್ನು ಗೆಲ್ಲಿಸಿ
ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ

"ಮುಂಜಾನೆಯ ಮೆರಗು"

ಚಿಕ್ಕಬಳ್ಳಾಪುರ ನ, 02– ಎತ್ತಿನಹೊಳೆ ಯೋಜನೆ ಆದಷ್ಟು ಬೇಗ ಪೂರ್ಣಗೊಂಡು ಬರದ ನಾಡು ಸಮೃದ್ಧ ನಾಡಾಗಬೇಕಾದರೆ 2028ರ ವಿಧಾನಸಭಾ ಚುನಾವಣೆಯಲ್ಲಿ ಚಿಕ್ಕಬಳ್ಳಾಪುರ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯನ್ನು ಗೆಲ್ಲಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮನವಿ ಮಾಡಿದರು.

ಸಂಸದ ಡಾ. ಕೆ. ಸುಧಾಕರ್ ಅವರ ನೇತೃತ್ವದಲ್ಲಿ ಚಿಕ್ಕಬಳ್ಳಾಪುರದಲ್ಲಿ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ತಮ್ಮ ನಾಲ್ಕೂವರೆ ದಶಕಗಳ ರಾಜಕೀಯ ಜೀವನದಲ್ಲಿ ಚುನಾವಣೆಯಲ್ಲಿ ಸೋತ ನಂತರವೂ 12 ಸಾವಿರಕ್ಕೂ ಹೆಚ್ಚು ಬಡ ವಿದ್ಯಾರ್ಥಿಗಳಿಗೆ ತಲಾ 5 ಸಾವಿರದಂತೆ ಆರ್ಥಿಕ ನೆರವು ನೀಡಿ ಶಿಕ್ಷಣಕ್ಕೆ ಪ್ರೋತ್ಸಾಹ ನೀಡಿದ ನಾಯಕನನ್ನು ನೋಡಿರಲಿಲ್ಲ. ಅಂತಹ ಮಾನವೀಯ ಗುಣ ಹೊಂದಿರುವ ನಾಯಕ ಡಾ. ಕೆ. ಸುಧಾಕರ್ ಎಂದು ಬೊಮ್ಮಾಯಿ ಮೆಚ್ಚುಗೆ ವ್ಯಕ್ತಪಡಿಸಿದರು.

ರಾಜಕೀಯದಲ್ಲಿ ಸೋಲು–ಗೆಲುವು ಸಹಜ. ಆದರೆ, ಸೋಲಿನ ಸಂದರ್ಭದಲ್ಲಿಯೂ ಕ್ಷೇತ್ರದ ಜನರೊಂದಿಗೆ ನಿಂತು ಅವರ ಸೇವೆ ಮುಂದುವರಿಸುವ ನಾಯಕರನ್ನು ಜನರು ಗುರುತಿಸಬೇಕು. ಡಾ. ಕೆ. ಸುಧಾಕರ್ ಅವರು ಚುನಾವಣೆಯಲ್ಲಿ ಸೋತರೂ ಜನಸೇವೆಯಿಂದ ಹಿಂದೆ ಸರಿದಿಲ್ಲ ಎಂದು ಹೇಳಿದರು.

ತಮ್ಮ ಸರ್ಕಾರದ ಅವಧಿಯಲ್ಲಿ ಎತ್ತಿನಹೊಳೆ ಯೋಜನೆಗೆ 9 ಸಾವಿರ ಕೋಟಿ ಅನುದಾನ ಒದಗಿಸಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿತ್ತು. ಈ ಯೋಜನೆ ಶೀಘ್ರ ಪೂರ್ಣಗೊಂಡು ಬರಪೀಡಿತ ಪ್ರದೇಶಗಳಿಗೆ ನೀರು ಹರಿಯಬೇಕು. ರೈತರ ಜಮೀನುಗಳು ಹಸಿರಿನಿಂದ ಕಂಗೊಳಿಸುವಂತಾಗಬೇಕು ಎಂಬುದು ತಮ್ಮ ಆಶಯವಾಗಿದೆ ಎಂದು ತಿಳಿಸಿದರು.



ಕಾರ್ಯಕ್ರಮದಲ್ಲಿ ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್. ಅಶೋಕ್, ವಿಧಾನ ಪರಿಷತ್ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಸಂಸದ ಡಾ. ಕೆ. ಸುಧಾಕರ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

2028ರ ವಿಧಾನಸಭಾ ಚುನಾವಣೆಯಲ್ಲಿ ಡಾ. ಕೆ. ಸುಧಾಕರ್ ಅವರನ್ನು ಮತ್ತೆ ವಿಧಾನಸಭೆಗೆ ಆಯ್ಕೆ ಮಾಡುವ ಮೂಲಕ ಚಿಕ್ಕಬಳ್ಳಾಪುರ ಕ್ಷೇತ್ರದ ಅಭಿವೃದ್ಧಿಗೆ ಮತ್ತಷ್ಟು ವೇಗ ನೀಡಬೇಕು ಎಂದು ಕರೆ ನೀಡಿದರು.

ಔರಾದ ಪಟ್ಟಣದ ಕುಡಿಯುವ ನೀರಿನ ಸಮಸ್ಯೆಗೆ ಶೀಘ್ರ ಪರಿಹಾರ: ಈಶ್ವರ ಖಂಡ್ರೆ

"ಮುಂಜಾನೆಯ ಮೆರಗು"

ಔರಾದ ನ, 02– ಬರಗಾಲದ ಹಿನ್ನೆಲೆಯಲ್ಲಿ ಔರಾದ ಪಟ್ಟಣದಲ್ಲಿ ತಲೆದೋರಿರುವ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಮಹತ್ವದ ಕ್ರಮ ಕೈಗೊಂಡಿದ್ದು, ತೆಗಂಪುರ ಗ್ರಾಮದ ಕೆರೆಯಿಂದ ಔರಾದ ಪಟ್ಟಣಕ್ಕೆ ನೀರು ಪೂರೈಸುವ ಯೋಜನೆಯ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಲಾಗುವುದು ಎಂದು ಸಚಿವ ಈಶ್ವರ ಖಂಡ್ರೆ ತಿಳಿಸಿದರು.

ಔರಾದ ತಾಲ್ಲೂಕಿನ ತೆಗಂಪುರ ಗ್ರಾಮದ ಕೆರೆಯಿಂದ ಪಟ್ಟಣಕ್ಕೆ ನೀರು ಹರಿಸುವ ಉದ್ದೇಶದಿಂದ ಕೈಗೆತ್ತಿಕೊಳ್ಳಲಾಗಿರುವ ಪೈಪ್‌ಲೈನ್ ಅಳವಡಿಕೆ ಹಾಗೂ ಮೋಟಾರ್‌ಗಳ ಸ್ಥಾಪನೆ ಕಾರ್ಯ ಈಗಾಗಲೇ ಶೇ.90ರಷ್ಟು ಪೂರ್ಣಗೊಂಡಿದೆ. ಬಾಕಿ ಉಳಿದಿರುವ ಕಾಮಗಾರಿಗಳನ್ನು ಒಂದು ವಾರದೊಳಗೆ ಪೂರ್ಣಗೊಳಿಸಿ ಪಟ್ಟಣಕ್ಕೆ ನೀರು ಪೂರೈಕೆ ಆರಂಭಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.



ಇಂದು ಸ್ಥಳೀಯ ಶಾಸಕರು ಹಾಗೂ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ತೆಗಂಪುರ ಕೆರೆಗೆ ಭೇಟಿ ನೀಡಿದ ಸಚಿವರು, ಯೋಜನೆಯ ಕಾಮಗಾರಿಗಳ ಪ್ರಗತಿಯನ್ನು ಸ್ಥಳದಲ್ಲಿಯೇ ಪರಿಶೀಲಿಸಿದರು. ಕಾಮಗಾರಿಗೆ ಅಗತ್ಯವಿರುವ ಅನುದಾನದ ಕೊರತೆಯಾಗದಂತೆ ತಕ್ಷಣ ಹಣ ಬಿಡುಗಡೆ ಮಾಡುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು.

ಬರಗಾಲದ ಪರಿಸ್ಥಿತಿಯಲ್ಲಿ ಔರಾದ ಪಟ್ಟಣದ ಜನರು ಕುಡಿಯುವ ನೀರಿಗಾಗಿ ಪರದಾಡುವಂತಾಗಬಾರದು. ಸಾರ್ವಜನಿಕರಿಗೆ ಸಮರ್ಪಕವಾಗಿ ಕುಡಿಯುವ ನೀರು ಒದಗಿಸುವುದು ಸರ್ಕಾರದ ಆದ್ಯತೆಯಾಗಿದ್ದು, ಈ ನಿಟ್ಟಿನಲ್ಲಿ ಯಾವುದೇ ವಿಳಂಬಕ್ಕೆ ಅವಕಾಶ ನೀಡಬಾರದು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಉಳಿದಿರುವ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಗುಣಮಟ್ಟದೊಂದಿಗೆ ಪೂರ್ಣಗೊಳಿಸಿ, ಶೀಘ್ರದಲ್ಲೇ ನೀರು ಪೂರೈಕೆ ಆರಂಭಿಸಬೇಕು. ಯೋಜನೆಯ ಅನುಷ್ಠಾನದಲ್ಲಿ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕು ಎಂದು ಸಚಿವರು ನಿರ್ದೇಶನ ನೀಡಿದರು.

ಅಭಿವೃದ್ಧಿ ಕ

ಸಿರಿಗೆರೆ ಶ್ರೀಗಳ ಸಂಕಲ್ಪಕ್ಕೆ ಸಾಕಾರ ರೂಪ: 57 ಕೆರೆಗಳ ಯಶಸ್ಸಿಗೆ ಬೃಹತ್ ಸಂಭ್ರಮ

ನ.8ರಂದು ಸಿರಿಗೆರೆ ಶ್ರೀಗಳ ಸಾನ್ನಿಧ್ಯದಲ್ಲಿ 'ಆಧುನಿಕ ಭಗೀರಥರ 57ರ ಸಡಗರ, ಸಂಭ್ರಮ'

"ಮುಂಜಾನೆಯ ಮೆರಗು"

ಜಗಳೂರು, ನ, 02– ತಾಲೂಕಿನ ರೈತರ ಬಹುದಿನಗಳ ಕನಸಾದ 57 ಕೆರೆ ತುಂಬಿಸುವ ಯೋಜನೆ ಸಾಕಾರಗೊಂಡಿರುವ ಹಿನ್ನೆಲೆಯಲ್ಲಿ ನ.8ರಂದು ಮಡ್ರಹಳ್ಳಿ (ಗುರುಸಿದ್ದಾಪುರ) ಗ್ರಾಮದ ಚೌಡೇಶ್ವರಿ ದೇವಿ ಸನ್ನಿಧಿಯಲ್ಲಿ ಸಿರಿಗೆರೆ ಬೃಹನ್ಮಠದ ಶ್ರೀ ಡಾ.ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿಗಳ ದಿವ್ಯ ಸಾನ್ನಿಧ್ಯದಲ್ಲಿ 'ಆಧುನಿಕ ಭಗೀರಥರ 57ರ ಸಡಗರ, ಸಂಭ್ರಮ' ಎಂಬ ವಿನೂತನ ಬೃಹತ್ ಕಾರ್ಯಕ್ರಮ ಆಯೋಜಿಸಲಾಗಿದೆ. ಈ ಐತಿಹಾಸಿಕ ಸಂಭ್ರಮದಲ್ಲಿ ಪಕ್ಷಾತೀತವಾಗಿ ಎಲ್ಲರೂ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಶಾಸಕ ಬಿ.ದೇವೇಂದ್ರಪ್ಪ ಮನವಿ ಮಾಡಿದರು.

ಸೋಮವಾರ ಪಟ್ಟಣದ ಶಾಸಕರ ಜನಸಂಪರ್ಕ ಕಚೇರಿಯಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ತರಳಬಾಳು ಹುಣ್ಣಿಮೆಯ ಆಶಯದಂತೆ ರೂಪುಗೊಂಡ 57 ಕೆರೆ ತುಂಬಿಸುವ ಯೋಜನೆ ಜಗಳೂರು ತಾಲೂಕಿನ ನೀರಾವರಿ ಇತಿಹಾಸದಲ್ಲಿ ಮಹತ್ವದ ಮೈಲಿಗಲ್ಲಾಗಿದೆ. ಈ ಯೋಜನೆ ಅನುಷ್ಠಾನಕ್ಕೆ ಸಿರಿಗೆರೆ ಶ್ರೀಗಳು 2018ರಿಂದ ನಿರಂತರ ಪ್ರಯತ್ನ ನಡೆಸಿದ್ದು, ವಿವಿಧ ಪಕ್ಷಗಳ ಆಡಳಿತಾವಧಿಯ ಮುಖ್ಯಮಂತ್ರಿಗಳು ಹಾಗೂ ನೀರಾವರಿ ಸಚಿವರ ಮೇಲೆ ಒತ್ತಡ ತರುವ ಮೂಲಕ ಕಾಮಗಾರಿಗೆ ವೇಗ ದೊರಕಿಸಿಕೊಟ್ಟಿದ್ದಾರೆ ಎಂದರು.

ನನ್ನ ಆಡಳಿತಾವಧಿಯಲ್ಲಿ ಬಹುತೇಕ ಕೆರೆಗಳಿಗೆ ನೀರು ಹರಿದಿದ್ದು, ಉತ್ತಮ ಮಳೆಯಾದ ಸಂದರ್ಭದಲ್ಲಿ ಕೆರೆಗಳು ಕೋಡಿ ಬಿದ್ದಿದ್ದವು. ಸಿರಿಗೆರೆ ಶ್ರೀಗಳ ಸಮ್ಮುಖದಲ್ಲಿ ಕೆರೆಗಳಿಗೆ ಬಾಗಿನ ಅರ್ಪಿಸುವ ಕಾರ್ಯಕ್ರಮವನ್ನೂ ನಡೆಸಲಾಗಿತ್ತು. ಪ್ರಸಕ್ತ ಸಾಲಿನಲ್ಲಿ ಮುಂಗಾರು ಮಳೆಯ ಕೊರತೆ ಹಾಗೂ ದೀಟೂರು ಸಮೀಪದ ಹೊಳೆಯಲ್ಲಿ ನೀರಿನ ಹರಿವು ಕಡಿಮೆಯಾದ ಕಾರಣ ಕೆರೆಗಳು ಕೋಡಿ ಬಿದ್ದಿಲ್ಲ. ಇದರಿಂದ ಬರದ ಪರಿಸ್ಥಿತಿ ಎದುರಾಗಿದ್ದರೂ ರೈತರ ಜಮೀನುಗಳ ಅಂತರ್ಜಲ ಮಟ್ಟ ಸಂಪೂರ್ಣ ಕುಸಿದಿಲ್ಲ. ಜಾನುವಾರುಗಳಿಗೂ ನೀರಿನ ಅಭಾವ ಉಂಟಾಗಿಲ್ಲ ಎಂದು ತಿಳಿಸಿದರು.

ಕೊಂಡಕುರಿ ಅರಣ್ಯದ ನಾಲ್ಕು ಕೆರೆಗಳಿಗೂ ನೀರು ಹರಿವು



57 ಕೆರೆ ತುಂಬಿಸುವ ಯೋಜನೆಯಡಿ ಮಡ್ರಹಳ್ಳಿ ಕೆರೆ, ಮಡ್ರಹಳ್ಳಿ ಹೊಸಕೆರೆ, ಅಗಸನಹಳ್ಳಿ ಹಾಗೂ ಮಾಗಡಿ ಕೆರೆಗಳನ್ನು ಸೇರ್ಪಡೆಗೊಳಿಸಲಾಗಿತ್ತು. ಆದರೆ ಕೊಂಡಕುರಿ ಅರಣ್ಯ ವ್ಯಾಪ್ತಿಯಲ್ಲಿ ಪೈಪ್‌ಲೈನ್ ಕಾಮಗಾರಿ ಕೈಗೊಳ್ಳಲು ಅರಣ್ಯ ಇಲಾಖೆಯ ಕಾನೂನು ತೊಡಕು ಎದುರಾಗಿತ್ತು. ಕೇಂದ್ರ ಅರಣ್ಯ ಇಲಾಖೆಯೊಂದಿಗೆ ನಿರಂತರ ಚರ್ಚೆ ಹಾಗೂ ಮನವಿ ಸಲ್ಲಿಸಿದ ಪರಿಣಾಮ ಒಂದೂವರೆ ತಿಂಗಳ ಹಿಂದೆ ಸಮಸ್ಯೆ ಇತ್ಯರ್ಥಗೊಂಡು ಕಾಮಗಾರಿ ಪೂರ್ಣಗೊಂಡಿದೆ. ಇದೀಗ ನಾಲ್ಕೂ ಕೆರೆಗಳಿಗೆ ಪ್ರಾಯೋಗಿಕವಾಗಿ ನೀರು ಹರಿಸಲಾಗಿದೆ. ಮುಂದಿನ ದಿನಗಳಲ್ಲಿ 57 ಕೆರೆಗಳಿಗೂ ನೀರು ಹರಿಯಲಿದೆ ಎಂಬ ವಿಶ್ವಾಸವಿದೆ ಎಂದರು.

ಇದಲ್ಲದೆ ಜಮ್ಮಾಪುರ ಹಾಗೂ ಬಿದರಕೆರೆ ಕೆರೆಗಳನ್ನೂ 57 ಕೆರೆ ತುಂಬಿಸುವ ಯೋಜನೆಗೆ ಸೇರ್ಪಡೆಗೊಳಿಸಲು ಹಸಿರು ನಿಶಾನೆ ದೊರೆತಿದೆ. ಇದರಿಂದ ತಾಲೂಕಿನ ನೀರಾವರಿ ವ್ಯವಸ್ಥೆಗೆ ಮತ್ತಷ್ಟು ಬಲ ಸಿಗಲಿದೆ ಎಂದು ಹೇಳಿದರು.

57ರ ಸಂಖ್ಯೆಯಲ್ಲಿ ವಿಶೇಷ ಮೆರವಣಿಗೆ

57 ಕೆರೆ ತುಂಬಿಸುವ ಯೋಜನೆಯ ಯಶಸ್ಸು ಹಾಗೂ ಸಿರಿಗೆರೆ ಶ್ರೀಗಳ ದೂರದೃಷ್ಟಿಯ ಸೇವೆಯನ್ನು ಸ್ಮರಿಸುವ ಉದ್ದೇಶದಿಂದ ನ.8ರಂದು ವಿಶೇಷ ಮೆರವಣಿಗೆ ಆಯೋಜಿಸಲಾಗಿದೆ. ಮೆರವಣಿಗೆಯಲ್ಲಿ 57 ಉರಿಮೆ, 57 ಕಹಳೆ, 57 ತಮಟೆ, 57 ಎತ್ತಿನ ಬಂಡಿಗಳು ಹಾಗೂ 57 ಮಹಿಳೆಯರಿಂದ ಕುಂಭಮೇಳ ನಡೆಯಲಿದೆ. ಬರದ ಪರಿಸ್ಥಿತಿ ಇರಬಹುದು, ಆದರೆ ಜನರ ಭಕ್ತಿ ಮತ್ತು ಅಭಿಮಾನಕ್ಕೆ ಬರವಿಲ್ಲ ಎಂಬುದನ್ನು ಈ ಕಾರ್ಯಕ್ರಮ ಸಾರಲಿದೆ ಎಂದು ಹೇಳಿದರು.

ಈ ಕಾರ್ಯಕ್ರಮವು ಕೇವಲ ಸಂಭ್ರಮಾಚರಣೆಯಾಗಿರದೆ, ತಾಲೂಕಿನ ರೈತರ ಬದುಕಿಗೆ ಹೊಸ ಭರವಸೆ ಮೂಡಿಸಿದ ನೀರಾವರಿ ಯೋಜನೆಯ ಹಿಂದಿನ ಶ್ರಮ, ಸಂಕಲ್ಪ ಹಾಗೂ ಸಹಕಾರವನ್ನು ಸ್ಮರಿಸುವ ವೇದಿಕೆಯಾಗಲಿದೆ ಎಂದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಷಂಷೀರ್ ಅಹಮ್ಮದ್, ಮುಖಂಡರಾದ ಪ್ರಕಾಶರೆಡ್ಡಿ, ಬಿ.ಮಹೇಶ್ವರಪ್ಪ, ಚಿತ್ತಪ್ಪ, ನಿಂಗಪ್ಪ, ಪಲ್ಲಾಗಟ್ಟೆ ಶೇಖರಪ್ಪ, ಗೌಸ್ ಅಹಮ್ಮದ್, ಷಂಷುದ್ದೀನ್, ತಿಪ್ಪೇಸ್ವಾಮಿ, ಶಂಭುಲಿಂಗಪ್ಪ, ಕೃಷ್ಣಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಜಿಲ್ಲೆಯ ಹಾಲಿ, ಮಾಜಿ ಶಾಸಕರು, ಸಚಿವರು, ಸಂಸದರಿಗೆ ಆಹ್ವಾನ

ನ.8ರಂದು ಸಿರಿಗೆರೆ ಶ್ರೀಗಳ ದಿವ್ಯ ಸಾನ್ನಿಧ್ಯದಲ್ಲಿ ನಡೆಯಲಿರುವ ಆಶೀರ್ವಚನ ಹಾಗೂ ಸಂಭ್ರಮದ ಕಾರ್ಯಕ್ರಮಕ್ಕೆ ಜಿಲ್ಲೆಯ ಹಾಲಿ ಮತ್ತು ಮಾಜಿ ಶಾಸಕರು, ಸಂಸದರು, ಸಚಿವರು ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಪ್ರಮುಖರನ್ನು ಆಹ್ವಾನಿಸಲಾಗುವುದು. ಮಾಜಿ ಶಾಸಕರಾದ ಟಿ.ಗುರುಸಿದ್ದನಗೌಡ, ಎಸ್.ವಿ.ರಾಮಚಂದ್ರ, ಎಚ್.ಪಿ.ರಾಜೇಶ್ ಸೇರಿದಂತೆ ಜಿಲ್ಲೆಯ ವಿವಿಧ ಕ್ಷೇತ್ರಗಳ ಜನಪ್ರತಿನಿಧಿಗಳು, ಮಾಜಿ ಹಾಗೂ ಹಾಲಿ ಉಸ್ತುವಾರಿ ಸಚಿವರು, ಮುಖ್ಯಮಂತ್ರಿಗಳು ಮತ್ತು ನೀರಾವರಿ ಸಚಿವರಿಗೂ ವೈಯಕ್ತಿಕವಾಗಿ ಆಹ್ವಾನ ನೀಡಲಾಗುವುದು.

ನೀರಾವರಿ ಅಭಿವೃದ್ಧಿ ಎನ್ನುವುದು ಪಕ್ಷಾತೀತ ವಿಚಾರ. ತಾಲೂಕಿನ ಅಭಿವೃದ್ಧಿ ಹಾಗೂ ರೈತರ ಹಿತದೃಷ್ಟಿಯಿಂದ ಎಲ್ಲ ರಾಜಕೀಯ ಪಕ್ಷಗಳ ಸಹಕಾರ ಅಗತ್ಯ. ಇಂತಹ ಜನಪರ ಯೋಜನೆಗಳ ವಿಚಾರದಲ್ಲಿ ರಾಜಕೀಯ ಸಲ್ಲದು ಎಂದು ಶಾಸಕ ಬಿ.ದೇವೇಂದ್ರಪ್ಪ ಹೇಳಿದರು.

ಕನ್ನಡ ನಾಡು–ನುಡಿಗೆ ಪ್ರತಿಯೊಬ್ಬರೂ ಗೌರವ ನೀಡಬೇಕು: ಕೆಂಚಪ್ಪ

"ಮುಂಜಾನೆಯ ಮೆರಗು"

ಜಗಳೂರು ನ, 02– ಕನ್ನಡ ನಾಡು, ನುಡಿ, ಭಾಷೆ ಹಾಗೂ ಸಂಸ್ಕೃತಿಗೆ ಪ್ರತಿಯೊಬ್ಬರೂ ಗೌರವ ನೀಡಬೇಕು. ಕನ್ನಡ ಭಾಷೆ ನಮ್ಮ ಹೆಮ್ಮೆಯ ಪ್ರತೀಕವಾಗಿದ್ದು, ಅದರ ಇತಿಹಾಸ, ಪರಂಪರೆ ಮತ್ತು ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ (ಇ.ಒ.) ಕೆಂಚಪ್ಪ ಹೇಳಿದರು.

ಭಾನುವಾರ ಪಟ್ಟಣದ ತಾಲೂಕು ಪಂಚಾಯಿತಿ ಕಚೇರಿ ಮುಂಭಾಗದಲ್ಲಿ ಕನ್ನಡ ರಾಜ್ಯೋತ್ಸವದ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಕನ್ನಡ ಭಾಷೆ ಸಾವಿರಾರು ವರ್ಷಗಳ ಇತಿಹಾಸ ಹೊಂದಿದ್ದು, ಅನೇಕ ಕವಿಗಳು, ಸಾಹಿತಿಗಳು, ವಚನಕಾರರು ಹಾಗೂ ದಾರ್ಶನಿಕರ ಕೊಡುಗೆಯಿಂದ ಶ್ರೀಮಂತ ಸಾಹಿತ್ಯ ಪರಂಪರೆಯನ್ನು ಹೊಂದಿದೆ. ಕನ್ನಡ ಭಾಷೆಗೆ ಜ್ಞಾನಪೀಠ ಪ್ರಶಸ್ತಿಗಳು ಲಭಿಸಿರುವುದು ನಾಡಿನ ಹೆಮ್ಮೆಯ ಸಂಗತಿಯಾಗಿದೆ. ಇಂತಹ ಶ್ರೇಷ್ಠ ಭಾಷೆಯನ್ನು ಕೇವಲ ರಾಜ್ಯೋತ್ಸವದ ದಿನಕ್ಕೆ ಸೀಮಿತಗೊಳಿಸದೆ, ದೈನಂದಿನ ಬದುಕಿನಲ್ಲಿಯೂ ಕನ್ನಡಕ್ಕೆ ಆದ್ಯತೆ ನೀಡಬೇಕು ಎಂದರು.

ಸರ್ಕಾರಿ ಕಚೇರಿಗಳಲ್ಲಿ ಕನ್ನಡ ಭಾಷೆಯ ಬಳಕೆಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು. ಸಾರ್ವಜನಿಕರೊಂದಿಗೆ ಕನ್ನಡದಲ್ಲಿಯೇ ವ್ಯವಹರಿಸುವ ಮೂಲಕ ಭಾಷೆಯ ಬೆಳವಣಿಗೆಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು. ಕನ್ನಡಿಗರಾದ ನಾವು ನಮ್ಮ ಭಾಷೆ, ನೆಲ, ಜಲ ಹಾಗೂ ಸಂಸ್ಕೃತಿಯ ಬಗ್ಗೆ ಅಭಿಮಾನ ಬೆಳೆಸಿಕೊಳ್ಳುವುದರ ಜೊತೆಗೆ ಕನ್ನಡದ ಗೌರವವನ್ನು ಎತ್ತಿಹಿಡಿಯಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಕಚೇರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದು, ಕನ್ನಡ ರಾಜ್ಯೋತ್ಸವದ ಸಂಭ್ರಮದಲ್ಲಿ ಭಾಗವಹಿಸಿದರು.

ಕನ್ನಡ ಭಾಷೆಗೆ ತನ್ನದೇ ಆದ ಶ್ರೀಮಂತ ಇತಿಹಾಸವಿದೆ: ಶಾಸಕ ಬಿ. ದೇವೇಂದ್ರಪ್ಪ

"ಮುಂಜಾನೆಯ ಮೆರಗು"

ಜಗಳೂರು ನ, 02– ಕನ್ನಡ ಭಾಷೆಗೆ ತನ್ನದೇ ಆದ ವಿಶಿಷ್ಟ ಇತಿಹಾಸ, ಶ್ರೀಮಂತ ಸಂಸ್ಕೃತಿ ಹಾಗೂ ಪರಂಪರೆಯಿದ್ದು, ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ಕನ್ನಡ ಭಾಷೆಯ ಉಳಿವು ಮತ್ತು ಬೆಳವಣಿಗೆಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಶಾಸಕ ಬಿ. ದೇವೇಂದ್ರಪ್ಪ ಹೇಳಿದರು.



ಪಟ್ಟಣದ ಜನಸಂಪರ್ಕ ಕಚೇರಿಯಲ್ಲಿ ಕನ್ನಡ ರಾಜ್ಯೋತ್ಸವದ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು. ಕನ್ನಡ ಭಾಷೆ ನಮ್ಮ ನಾಡಿನ ಅಸ್ಮಿತೆ ಹಾಗೂ ಸ್ವಾಭಿಮಾನದ ಸಂಕೇತವಾಗಿದೆ. ಕನ್ನಡ ನಾಡು, ನುಡಿ, ನೆಲ, ಜಲ ಮತ್ತು ಸಂಸ್ಕೃತಿಯನ್ನು ಗೌರವಿಸುವುದರ ಜೊತೆಗೆ ಮುಂದಿನ ಪೀಳಿಗೆಗೂ ಕನ್ನಡದ ಮಹತ್ವವನ್ನು ತಿಳಿಸಿಕೊಡಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಕಾರ್ಯದರ್ಶಿ ಬಲಘಟ್ಟ ಶೇಖರಪ್ಪ ಮಾತನಾಡಿದರು.

ಕಾರ್ಯಕ್ರಮದಲ್ಲಿ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಎಲ್. ತಿಪ್ಪೇಸ್ವಾಮಿ, ಕಾಂಗ್ರೆಸ್ ಎಸ್ಸಿ ಘಟಕದ ಅಧ್ಯಕ್ಷ ಮಹೇಶ್ವರಪ್ಪ, ಪಿಎಸ್‌ಐ ಧರಿಯಪ್ಪ, ಇಕ್ಬಾಲ್, ನಾಗೇಂದ್ರ ರೆಡ್ಡಿ, ಗೌಸ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಮಲ್ಲಾಪುರದ ಜಯಪ್ರಕಾಶ ನಾರಾಯಣ ಪ್ರೌಢಶಾಲೆಯಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ

"ಮುಂಜಾನೆಯ ಮೆರಗು"

ಜಗಳೂರು ನ, 02– ಕನ್ನಡ ಭಾಷೆ, ನಾಡು, ನುಡಿ ಹಾಗೂ ಸಂಸ್ಕೃತಿಯ ಶ್ರೀಮಂತ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಉದ್ದೇಶದಿಂದ ತಾಲೂಕಿನ ಮಲ್ಲಾಪುರ ಗ್ರಾಮದ ಜಯಪ್ರಕಾಶ ನಾರಾಯಣ ಪ್ರೌಢಶಾಲೆಯಲ್ಲಿ ಕನ್ನಡ ರಾಜ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಶಾಲಾ ಆವರಣದಲ್ಲಿ ಕನ್ನಡ ಧ್ವಜಾರೋಹಣ ನೆರವೇರಿಸಿ, ಕನ್ನಡಾಂಬೆಗೆ ಗೌರವ ಸಲ್ಲಿಸಲಾಯಿತು. ವಿದ್ಯಾರ್ಥಿಗಳು ಕನ್ನಡ ನಾಡು, ನುಡಿ, ಭಾಷೆ ಹಾಗೂ ಕನ್ನಡದ ಮಹತ್ವ ಸಾರುವ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ರಾಜ್ಯೋತ್ಸವದ ಸಂಭ್ರಮಕ್ಕೆ ಮೆರುಗು ನೀಡಿದರು.

ಕನ್ನಡ ಭಾಷೆ ನಮ್ಮ ನಾಡಿನ ಅಸ್ಮಿತೆಯಾಗಿದ್ದು, ಪ್ರತಿಯೊಬ್ಬರೂ ಕನ್ನಡವನ್ನು ಪ್ರೀತಿಸುವುದರ ಜೊತೆಗೆ ದೈನಂದಿನ ಜೀವನದಲ್ಲಿ ಕನ್ನಡ ಭಾಷೆಯ ಬಳಕೆಗೆ ಹೆಚ್ಚಿನ ಆದ್ಯತೆ ನೀಡಬೇಕು. ವಿದ್ಯಾರ್ಥಿಗಳು ಕನ್ನಡ ಸಾಹಿತ್ಯ, ಸಂಸ್ಕೃತಿ ಹಾಗೂ ನಾಡಿನ ಇತಿಹಾಸದ ಬಗ್ಗೆ ಅರಿವು ಬೆಳೆಸಿಕೊಳ್ಳಬೇಕು ಎಂಬ ಆಶಯವನ್ನು ಈ ಸಂದರ್ಭದಲ್ಲಿ ವ್ಯಕ್ತಪಡಿಸಲಾಯಿತು.



ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರು, ಸಿಬ್ಬಂದಿ, ಗ್ರಾಮದ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದು ಕನ್ನಡ ರಾಜ್ಯೋತ್ಸವದ ಸಂಭ್ರಮದಲ್ಲಿ ಪಾಲ್ಗೊಂಡಿದ್ದರು.

ಭರಮಸಮುದ್ರ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವ ಸಂಭ್ರಮ

"ಮುಂಜಾನೆಯ ಮೆರಗು"

ಜಗಳೂರು ನ, 02– ಕನ್ನಡ ಭಾಷೆ, ನಾಡು, ನುಡಿ ಹಾಗೂ ಸಂಸ್ಕೃತಿಯ ಶ್ರೀಮಂತ ಪರಂಪರೆಯನ್ನು ಉಳಿಸಿ ಬೆಳೆಸುವ ಉದ್ದೇಶದಿಂದ ತಾಲೂಕಿನ ಭರಮಸಮುದ್ರ ಗ್ರಾಮದ ಸರ್ದಾರ್ ವಲ್ಲಭಭಾಯಿ ಪಟೇಲ್ ಪ್ರೌಢಶಾಲೆಯಲ್ಲಿ ಕನ್ನಡ ರಾಜ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು.



ಕಾರ್ಯಕ್ರಮದಲ್ಲಿ ಕನ್ನಡ ಧ್ವಜಾರೋಹಣ ನೆರವೇರಿಸಿ, ತಾಯಿ ಭುವನೇಶ್ವರಿಗೆ ಗೌರವ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಕನ್ನಡ ನಾಡಿನ ಇತಿಹಾಸ, ಭಾಷೆಯ ಹಿರಿಮೆ, ಸಾಹಿತಿಗಳು, ಕವಿಗಳು ಹಾಗೂ ಕನ್ನಡ ನಾಡಿನ ಏಕೀಕರಣಕ್ಕಾಗಿ ಶ್ರಮಿಸಿದ ಮಹನೀಯರ ಕೊಡುಗೆಯನ್ನು ಸ್ಮರಿಸಲಾಯಿತು.

ಕನ್ನಡ ಭಾಷೆ ಕೇವಲ ಸಂವಹನದ ಮಾಧ್ಯಮವಲ್ಲ. ಅದು ನಮ್ಮ ನಾಡಿನ ಸಂಸ್ಕೃತಿ, ಪರಂಪರೆ ಮತ್ತು ಜೀವನ ಮೌಲ್ಯಗಳ ಪ್ರತೀಕವಾಗಿದೆ. ವಿದ್ಯಾರ್ಥಿಗಳು ಬಾಲ್ಯದಿಂದಲೇ ಕನ್ನಡ ಭಾಷೆಯ ಬಗ್ಗೆ ಅಭಿಮಾನ ಬೆಳೆಸಿಕೊಂಡು, ದೈನಂದಿನ ಜೀವನದಲ್ಲಿ ಕನ್ನಡವನ್ನು ಹೆಚ್ಚಾಗಿ ಬಳಸುವ ಮೂಲಕ ಭಾಷೆಯ ಬೆಳವಣಿಗೆಗೆ ಕೈಜೋಡಿಸಬೇಕು ಎಂಬ ಆಶಯವನ್ನು ವ್ಯಕ್ತಪಡಿಸಲಾಯಿತು.

ಶಾಲಾ ಶಿಕ್ಷಕರು, ಗ್ರಾಮದ ಮುಖಂಡರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ಕನ್ನಡ ರಾಜ್ಯೋತ್ಸವದ ಸಂಭ್ರಮವನ್ನು ಹೆಚ್ಚಿಸಿದರು.

ಉಜ್ಜಪ್ಪ ಒಡೆಯರಹಳ್ಳಿ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ

"ಮುಂಜಾನೆಯ ಮೆರಗು"

ಜಗಳೂರು ನ, 02– ತಾಲೂಕಿನ ಉಜ್ಜಪ್ಪ ಒಡೆಯರಹಳ್ಳಿ ಗ್ರಾಮದ ಎಸ್.ಎಲ್.ವಿ.ಎಸ್.ಆರ್.ಎಚ್.ಎಸ್. ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಕನ್ನಡ ಧ್ವಜಾರೋಹಣ ನೆರವೇರಿಸಿ, ಕನ್ನಡ ನಾಡು, ನುಡಿ ಹಾಗೂ ಭಾಷೆಯ ಮಹತ್ವವನ್ನು ಸ್ಮರಿಸಲಾಯಿತು. ಈ ಸಂದರ್ಭದಲ್ಲಿ ಕನ್ನಡ ನಾಡಿನ ಇತಿಹಾಸ, ಶ್ರೀಮಂತ ಸಂಸ್ಕೃತಿ, ಸಾಹಿತ್ಯ, ಕಲೆ ಹಾಗೂ ಪರಂಪರೆಯನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬ ಕನ್ನಡಿಗರ ಮೇಲಿದೆ ಎಂಬ ಸಂದೇಶ ಸಾರಲಾಯಿತು.



ವಿದ್ಯಾರ್ಥಿಗಳಲ್ಲಿ ಕನ್ನಡ ಭಾಷೆಯ ಬಗ್ಗೆ ಅಭಿಮಾನ ಮತ್ತು ಗೌರವ ಬೆಳೆಸುವ ನಿಟ್ಟಿನಲ್ಲಿ ರಾಜ್ಯೋತ್ಸವ ಆಚರಣೆ ಮಹತ್ವದ್ದಾಗಿದೆ. ಕನ್ನಡ ಭಾಷೆಯನ್ನು ದೈನಂದಿನ ಜೀವನದಲ್ಲಿ ಹೆಚ್ಚು ಹೆಚ್ಚು ಬಳಸುವ ಮೂಲಕ ಭಾಷೆಯ ಬೆಳವಣಿಗೆಗೆ ಎಲ್ಲರೂ ಕೈಜೋಡಿಸಬೇಕು ಎಂದು ತಿಳಿಸಲಾಯಿತು.

ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರು, ಸಿಬ್ಬಂದಿ ವರ್ಗದವರು, ಗ್ರಾಮದ ಮುಖಂಡರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದು, ಕನ್ನಡ ರಾಜ್ಯೋತ್ಸವದ ಸಂಭ್ರಮದಲ್ಲಿ ಪಾಲ್ಗೊಂಡಿದ್ದರು.

ದಾರ್ಶನಿಕರ ಆದರ್ಶಗಳು ಸಮಾಜಕ್ಕೆ ದಾರಿದೀಪ: ಶಿಕ್ಷಣ, ಕಾಯಕ, ದಾಸೋಹಕ್ಕೆ ಆದ್ಯತೆ ನೀಡಲು ಶಾಸಕ ಬಿ.ದೇವೇಂದ್ರಪ್ಪ ಕರೆ

"ಮುಂಜಾನೆಯ ಮೆರಗು"

ಜಗಳೂರು ನ, 02– ಸಮಾಜದ ಪರಿವರ್ತನೆ ಹಾಗೂ ಮಾನವೀಯ ಮೌಲ್ಯಗಳ ವೃದ್ಧಿಗೆ ದಾರ್ಶನಿಕರು, ಶರಣರು ಮತ್ತು ಮಹಾತ್ಮರು ನೀಡಿರುವ ಕೊಡುಗೆ ಅಪಾರವಾಗಿದೆ. ಅವರು ತಮ್ಮ ಜೀವನದ ಮೂಲಕ ಸಮಾಜಕ್ಕೆ ತೋರಿಸಿಕೊಟ್ಟ ತತ್ವ, ಆದರ್ಶ ಹಾಗೂ ಮೌಲ್ಯಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಶಾಸಕ ಬಿ. ದೇವೇಂದ್ರಪ್ಪ ಕರೆ ನೀಡಿದರು.

ಸೋಮವಾರ ಪಟ್ಟಣದ ಆರ್.ವಿ.ಎಸ್. ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಆಯೋಜಿಸಿದ್ದ ವೀರೇಶ್ ಅವರ ಜನ್ಮದಿನಾಚರಣೆ ಹಾಗೂ ಶ್ರೀಮದ್